# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 117 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 23-11-2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 117 | RNI No: KARKAN/2023/88462 | Chitradurga | Date: 23-11-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**
ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ: ಡಿ.01 ರಿಂದ ನೋಂದಣಿ 2
ವ್ಯಕ್ತಿತ್ವ ವಿಕಸನಕ್ಕೆ ಪಠ್ಯೇತರ ಚಟುವಟಿಕೆ ಅವಶ್ಯಕ: ಡಾ.ಜಿ.ಕೆ.ಪ್ರೇಮ 3
ಚರಂಡಿ ವ್ಯವಸ್ಥೆ ಇಲ್ಲದೆ ಚಡಪಡಿಸುತ್ತಿರುವ ಭಗೀರಥ ಬಡಾವಣೆಯ ನಾಗರೀಕರು 4



ಸುದ್ದಿ, ಜಾಹಿರಾತಿಗೆ 9686622252


# ನಮ್ಮ ಭೂಮಿ ನಮ್ಮ ಹಕ್ಕು; ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ

» ಚಿತ್ರದುರ್ಗ

ನೀವು ಮುಡ ಹಗರಣದಿಂದ ತಪ್ಪಿಸಿಕೊಳ್ಳುವ ಪ್ರಯತ್ನದಲ್ಲಿಯೇ ಮುಳುಗಿದ್ದೀರಿ..ರಾಜ್ಯದ ರೈತರ ಬಗ್ಗೆ ಚಿಂತೆ ಇಲ್ಲ..ರಾಜ್ಯದ ಜನರು ನಿಮಗೆ ಅಧಿಕಾರ ಕೊಟ್ಟಿದ್ದಾರೆ.. ನೀವು ಅವರ ಕಣ್ಣೀರು ಒರೆಸಲಿ ಎಂದು ಆದರೆ ನೀವು ಯಾರೊಬ್ಬರ ಒಳ್ಳೆಕೆ ಮಾಡಲಿಕ್ಕೆ ಅನ್ಯಾಯ ಮಾಡುತ್ತಿದ್ದೀರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯರವರ ವಿರುದ್ಧ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್,ನವೀನ್ ವಾಗ್ದಾಳಿ ನಡೆಸಿದರು.




ರಾಜ್ಯದ ರೈತರ ಕೃಷಿ ಭೂಮಿ, ಮಠ, ಮಂದಿರ,ಜನಸಾಮಾನ್ಯರಜಮೀನುಗಳನ್ನು ವಕ್ಫ್ ಬೋರ್ಡ್ ಹೆಸರಿನಲ್ಲಿ ಅಕ್ರಮವಾಗಿ ಕಬಳಿಸುವ ಷಡ್ಯಂತ್ರದ ಜನವಿರೋಧಿ ನೀತಿ ವಿರುದ್ಧ ನಮ್ಮ ಭೂಮಿ ನಮ್ಮ ಹಕ್ಕು ಎಂಬ ಹಕ್ಕೊತ್ತಾಯದೊಂದಿಗೆ ನಗರದ ಡಿ.ಸಿ.ಸರ್ಕಲ್‌ನಲ್ಲಿ ಅಭಿಯಾನದಡಿ ಹಮ್ಮಿಕೊಂಡಿದ್ದು ಹೋರಾಟದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮ ಭೂಮಿ ನಮ್ಮ ಹಕ್ಕು ಘೋಷಣೆಯೊಂದಿಗೆ ನಿನ್ನೆ ಮತ್ತು ಇಂದು ರಾಜ್ಯಾದ್ಯಂತ ಬಿಜೆಪಿ ಪಕ್ಷ ಹೋರಾಟ ಮಾಡುತ್ತಿದೆ. ಸಿದ್ದರಾಮಯ್ಯನವರ ಸೂಚನೆಯ ಮೇರೆಗೆ ವಕ್ಫ್ ಸಚಿವರು ಎಲ್ಲಾ ಜಿಲ್ಲೆಗಳಿಗೆ ಹೋಗಿ ವಕ್ಫ್ ಆಸ್ತಿಯನ್ನಾಗಿ ವಶಪಡಿಸಿಕೊಳ್ಳಬೇಕೆಂದು ಅಧಿಕೃತ ರೆಜ್ಯುಲೇಷನ್ ಮಾಡಿ ಮಠ ಮಾನ್ಯಗಳ, ರೈತರ ದೇವಸ್ಥಾನದ ಆಸ್ತಿಯನ್ನು ವಕ್ಫ್ ಹೆಸರಿಗೆ ಬರುವ ಹಾಗೆ ಮಾಡಿಕೊಳ್ಳುತ್ತಿದ್ದಾರೆ.ನಮ್ಮ ಭಾರತ ನಮ್ಮ ಕರ್ನಾಟಕ ಯಾರಿಗೆ ಸೇರಿದ್ದು ಎಂಬುದರ ಬಗ್ಗೆ ಚಿಂತೆ ಮಾಡಬೇಕು.. ಈ ದೇಶವನ್ನು ಪಾಕಿಸ್ತಾನಕ್ಕೆ ಸೇರಿಸುವ ಕೆಲಸವೇನ್ನಾದರೂ ಮಾಡುತ್ತಿದ್ದಾರೋ...? ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಹೇಳುತ್ತಾರೆ ರೈತರ ಜಮೀನನ್ನು ಪಡೆದುಕೊಳ್ಳುವ ಆದೇಶವನ್ನು ಮಾಡುವುದಿಲ್ಲ.. ಈ ಮೊದಲು ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ಹೇಗೆ ಬಂತು ಎಂಬುದರ ಬಗ್ಗೆ ಮೊದಲು ಉತ್ತರ ಕೊಡಿ.ರಾಜ್ಯದ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ.. ಯಾರು ಸಹ ನೆಮ್ಮದಿಯಿಂದ ಬದುಕುವುದಕ್ಕೆ ಆಗುತ್ತಿಲ್ಲ ಇದಕ್ಕೆ ಕಾರಣ ಭ್ರಷ್ಟಾಚಾರಿ ಸಿದ್ದರಾಮಯ್ಯನವರು.ಒಂದೇ ಒಂದು ಇಂಚು ಸಹ ರೈತರ, ಮಠ ಮಾನ್ಯಗಳ ದೇವಸ್ಥಾನದ ಆಸ್ತಿಯನ್ನು ವಕ್ಫ್‌ಗೆ ಕೊಡುವ ಪ್ರಶ್ನೆಯೇ ಇಲ್ಲ ಏನು ಮಾಡುತ್ತೀರಿ ಮಾಡಿ ಎಂದ ಸಿದ್ದರಾಮಯ್ಯರವರಿಗೆ ಎಚ್ಚರಿಕೆಯನ್ನು ನೀಡಿದ ನವೀನ್ ನಮ್ಮ ಜಿಲ್ಲೆಯಲ್ಲಿ ನಂದನಹೊಸೂರಿನಲ್ಲಿ ಬಹು ಸಂಖ್ಯಾತ ಹಿಂದುಗಳಿಗೆ ಕಾಲು ಎಕರೆ ರುದ್ರಭೂಮಿ ಸಹ ಇಲ್ಲ.. ಆದರೆ ಸುಮಾರು ವರ್ಷಗಳ ಹಿಂದೆ ವಾಸವಾಗಿ ಹೋದ ಅಲ್ಪಸಂಖ್ಯಾತರಿಗೆ 5 ಎಕರೆ ಖಾಬರಸ್ಥಾನಕ್ಕೆ ಕೊಟ್ಟಿದ್ದೀರಿ ಎಂದ ಅವರು ಡಿಸೆಂಬರ್ ಮೊದಲ ವಾರದಲ್ಲಿ ನಮ್ಮ ನಾಯಕರ ತಂಡ ಜಿಲ್ಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ ಎಂದರು.

ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಮಲ್ಲಿಕಾರ್ಜುನ್ ಮಾತನಾಡಿ, ವಕ್ಫ್ ಆಸ್ತಿ ರಾಜ್ಯದಲ್ಲಿ ದೊಡ್ಡ ಸಮಸ್ಯೆ ಸೃಷ್ಟಿಸಿದೆ. ಕಾಂಗ್ರೆಸ್ ಸರ್ಕಾರದ ಒಂದು ಸಮುದಾಯದ ತುಷ್ಟೀಕರಣ ಫಲವಾಗಿ ಸಾವಿರಾರು ಸಂಖ್ಯೆಯ ರೈತರು, ಮಠಾಧೀಶರು, ಸ್ವಾಮೀಜಿ, ನಾಗರಿಕರು ಇದು ನಮ್ಮ ಭೂಮಿ ಎಂದು ಬೀದಿಗಿಳಿದು ಹೋರಾಟ ಮಾಡಬೇಕಾದ ವಾತಾವರಣ ಸೃಷ್ಟಿಸಿದೆ ಲ್ಯಾಂಡ್ ಜಿಹಾದ್ ಮೂಲಕ ಹಿಂದೂ ಸಮಾಜದ ಆಸ್ತಿಗಳನ್ನು ಕಬಳಿಸುವ ಹುನ್ನಾರ ನಡೆಸಿರುವ ರಾಜ್ಯ ಸರ್ಕಾರವನ್ನು ಜನರೇ ಕಿತ್ತೊಗೆಯಲಿದ್ದಾರೆ. ಪ್ರತಿ ದಿನ ಹಗರಣ, ಭ್ರಷ್ಟಾಚಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಈಗ ವಕ್ಫ್ ಕಾಯ್ದೆ ಮುಂದಿಟ್ಟು ರಾತ್ರೋರಾತ್ರಿ ಆಸ್ತಿಗಳನ್ನು ವಕ್ಫ್ ಮಂಡಳಿ ಆಸ್ತಿಯನ್ನಾಗಿ ಮಾಡುತ್ತಿದೆ ಎಂದು ಆರೋಪಿಸಿದರು.

ಸರ್ಕಾರ ವಕ್ಫ್ ನೋಟಿಸ್ ರದ್ದು ಪಡಿಸುವುದಾಗಿ ಹೇಳುತ್ತಿದೆ. ನೋಟಿಸ್ ರದ್ದುಗೊಳಿಸುವ ಜೊತೆಗೆ ಪಹಣಿ ಕಾಲಂ 11 ರಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿರುವುದನ್ನೂ ತೆಗೆದು ಹಾಕುವ ಕೆಲಸ ಮಾಡಬೇಕು.ಈಗ ಸಾಂಕೇತಿಕವಾಗಿ ಹೋರಾಟ ನಡೆಸಲಾಗುತ್ತಿದೆ. ಸರ್ಕಾರ ವಕ್ಫ್ ಸಮಸ್ಯೆಗೆ ಶಾಶ್ವತವಾದ ಪರಿಹಾರ ಕೊಡದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ಮುಖಂಡ ಎನ್. ಆರ್. ಲಕ್ಷ್ಮೀಕಾಂತ್, ಬಯಲುಸೀಮೆ ಅಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಜೀವನಮೂರ್ತಿ, ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ರಾಜೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ಸಿದ್ದಾಪುರ, ರಾಮದಾಸ್, ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಯಾದವ್, ನಗರಧ್ಯಕ್ಷ ನವೀನ್ ಚಾಲುಕ್ಯ, ಜಿಲ್ಲಾ ಖಂಜಾಚಿ ಮಾಧುರಿ ಗೀರಿಶ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ಹಿರಿಯೂರು ಮಂಡಲ ಅಧ್ಯಕ್ಷ ವಿಶ್ವನಾಥ್, ಯುವ ಮೋರ್ಚಾದ ಚಂದ್ರು, ರೂಪ, ವೀಣಾ, ಬಸಮ್ಮ, ಕಂಚನ, ಕವೀತಾ, ಸುಮ, ಕಿರಣ್, ಲೋಕೇಶ್, ಯೋಗೇಶ್ ಸಹ್ಯಾದ್ರಿ, ಜಗದೀಶ್, ಹೇಮಂತ, ಕಲ್ಲಂಸೀತಾರಾಮರೆಡ್ಡಿ, ರಜನೀ ಹರೀಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಶೌಚಾಲಯ ಆಂದೋಲನ: ಪ್ರಚಾರ ವಾಹನಕ್ಕೆ ಚಾಲನೆ

» ಚಿತ್ರದುರ್ಗ

ವಿಶ್ವ ಶೌಚಾಲಯ ದಿನಾಚರಣೆ ಅಂಗವಾಗಿ ಜಿಲ್ಲೆಯಾದ್ಯಂತ ಡಿ.20 ರವರೆಗೆ 'ನಮ್ಮ ಶೌಚಾಲಯ ನಮ್ಮ ಗೌರವ' ವಿಶೇಷ ಆಂದೋಲನ ಜರುಗಲಿದ್ದು, ಆಂದೋಲನದ ಪ್ರಚಾರ ವಾಹನಕ್ಕೆ ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಆವರಣದಲ್ಲಿ ಶುಕ್ರವಾರ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಯೋಗದಲ್ಲಿ ನಮ್ಮ ಶೌಚಾಲಯ–ನಮ್ಮ ಗೌರವ ವಿಶೇಷ ಆಂದೋಲನ ಕಾರ್ಯಕ್ರಮದ ಪ್ರಯುಕ್ತ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಜಲಜೀವನ್ ಮಿಷನ್ ಯೋಜನೆಗಳ ಮಾಹಿತಿ ಶಿಕ್ಷಣ ಹಾಗೂ ಸಂವಹನ ಚಟುವಟಿಕೆಯ ಆಟೋ ಪ್ರಚಾರಕ್ಕೆ ಚಾಲನೆ ನೀಡಿದರು. ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಜಲಜೀವನ್ ಮಿಷನ್ ಯೋಜನೆ ಪ್ರಚಾರ ವಾಹನದಲ್ಲಿಯೇ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ನಮ್ಮ ಶೌಚಾಲಯ ನಮ್ಮ ಗೌರವ ಆಂದೋಲನ ಪ್ರಚಾರ ನಡೆಯಲಿದೆ. ಈ ಮೂಲಕ ಸುರಕ್ಷಿತ ನೈರ್ಮಲ್ಯ ಹಾಗೂ ಬಹಿರ್ದೆಸೆ ಮುಕ್ತ ವಾತಾವರಣ ಸೃಷ್ಟಿಸಿ, ನಿರಂತರವಾಗಿ ಶೌಚಾಲಯಗಳನ್ನು ಬಳಸಲು ಪ್ರೇರೇಪಿಸಲಾಗುವುದು. ವೈಯಕ್ತಿಕ ಗೃಹ ಹಾಗೂ ಸಮುದಾಯ ಶೌಚಾಲಯಗಳ ಬಳಕೆ ಮತ್ತು ನಿರ್ವಹಣೆ, ವೈಯಕ್ತಿಕ ಸ್ವಚ್ಚತೆ, ಘನ ತ್ಯಾಜ್ಯ ನಿರ್ವಹಣೆ, ಬೂದು ನೀರು ನಿರ್ವಹಣೆ, ಪ್ಲಾಸ್ಟಿಕ್ ನಿಷೇದ ಕುರಿತು ಪ್ರತಿ ಗ್ರಾಮದಲ್ಲಿ ಆಟೋ ಪ್ರಚಾರ ಮಾಡಲಾಗುವುದು. ಇದರೊಂದಿಗೆ ಜಲ ಜೀವನ್ ಮಿಷನ್ ಯೋಜನೆಯ ಕಾರ್ಯಾತ್ಮಕ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಒದಗಿಸುವ ಬಗ್ಗೆ, ಕಲುಷಿತ ನೀರು ಸೇವನೆಯಿಂದ ಆಗುವ ಪರಿಣಾಮ, ಕ್ಷೇತ್ರ ಪರೀಕ್ಷಾ ಕಿಟ್ ಬಳಸಿ ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಕೈಗೊಳ್ಳುವ ಕುರಿತು ವಾಹನದಲ್ಲಿ ಪ್ರಚಾರ ಮಾಡಲಾಗುತ್ತದೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸಿ.ಎನ್.ಗಾಯಿತ್ರಿ ಸೇರಿದಂತೆ ಯೋಜನಾ ನಿರ್ದೇಶಕರು, ಜಿಲ್ಲಾ ಮಟ್ಟದ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಿಬ್ಬಂದಿಗಳು, ಜಿಲ್ಲಾ ಸಮಾಲೋಚಕರು, ಜಿಲ್ಲಾ ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.




**ಪ್ರಮುಖ ಸುದ್ದಿ**

# ರೈತರ ಬದುಕಿನಲ್ಲಿ ಬಿರುಗಾಳಿ ಎಬ್ಬಿಸಿದ ವಕ್ಫ್ ವಿರುದ್ಧ ನಿರಂತರ ಹೋರಾಟ: ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ

» ಚಳ್ಳಕೆರೆ

ಕರ್ನಾಟಕ ರಾಜ್ಯದಲ್ಲಿ ಕಳೆದ ಎರಡು ತಿಂಗಳಿನಿಂದ ರಾಜ್ಯದ ಪುರಾತನ ದೇವಸ್ಥಾನ, ಸರ್ಕಾರಿ ಶಾಲೆ, ಕಟ್ಟಡಗಳು ಹಾಗೂ ರೈತರು ಉಳಿಮೆ ಮಾಡುವ ಜಮೀನುಗಳು ವಕ್ಫ್ ಆಸ್ತಿ ಎಂದು ನಮೂದಿಸುವ ಮೂಲಕ ರಾಜ್ಯದ ಜನರಲ್ಲಿ ಭಯಭೀತಿಉಂಟುಮಾಡಿದಕಾಯ್ದೆಯನ್ನು ಸರ್ಕಾರ ವಾಪಾಸ್ ಪಡೆಯಬೇಕು, ಯಾವುದೇ ಕಾರಣಕ್ಕೂ ರೈತರ ಜಮೀನು ವಕ್ಫ್‌ಬೋರ್ಡ್‌ಗೆ ಸೇರದಂತೆ ಜಾಗೃತಿಮೂಡಿಸಲು ವಕ್ಫ್‌ವಿರುದ್ಧ ಬೃಹತ್ ಹೋರಾಟ ಹಾಗೂ ರೈತ ಘರ್ಜನ ರ್‍ಯಾಲಿ ಹಮ್ಮಿಕೊಂಡಿರುವುದಾಗಿ ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಕರೀಕೆರೆ ಜಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ.




ಅವರು, ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಭಾರತೀಯ ಕಿಸಾನ್ ಸಂಘ ರಾಜ್ಯದ ಯಾವುದೇ ಪ್ರದೇಶದಲ್ಲೂ ರೈತರ ಸಮಸ್ಯೆಗಳಿಗೆ ಬೀದಿಗಿಳಿದು ಹೋರಾಟ ನಡೆಸಲಿದೆ. ಇತ್ತೀಚಿನ ದಿನಗಳಲ್ಲಿ ದಿಡೀರನೇ ಹೊರಹೊಮ್ಮಿದ ವಕ್ಫ್ ಗಲಾಟೆ ವಿರುದ್ಧ ಬೀದಿಗಿಳಿದು ಹಂತ, ಹಂತವಾಗಿ ಪ್ರತಿಭಟನೆ ನಡೆಸಲಾಗುತ್ತಿದೆ. ನ.25ರ ಸೋಮವಾರ ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಎಲ್ಲಾ ಮಠಾಧೀಶರ ನೇತೃತ್ವದಲ್ಲಿ ಚಳುವಳಿ ನಡೆಸಿ ಮುಖ್ಯಮಂತ್ರಿಗಳಿಗೆ ಮನವಿ ಅರ್ಪಿಸಲಾಗುವುದು. ನ.26ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ರೈತ ಘರ್ಜನ ರ್‍ಯಾಲಿ ಇದ್ದು ಜಿಲ್ಲೆಯಾದ್ಯಂತ ಸಾವಿರಾರು ರೈತರು ಭಾಗವಹಿಸುವರು ಎಂದಿದ್ದಾರೆ. ಭಾರತೀಯ ಕಿಸಾನ್ ಸಂಘದ ಪ್ರಾಂತ್ಯಕಾರ್ಯಕಾರಿ ಸಮಿತಿ ಸದಸ್ಯೆ ಅಮೃತ, ಜ್ಞಾನೇಶ್ವರ್, ಹನುಮಂತಪ್ಪ, ಸಿ.ವೀರೇಶ್,ಮಂಜುನಾಥ,ವೆಂಕಟೇಶ್‌ರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನ.25ರಂದು ಸಮುದಾಯ ಆರೋಗ್ಯಾಧಿಕಾರಿಗಳಿಗೆ ತರಬೇತಿ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ನ.25ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲಾ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ "ಗುಣಮಟ್ಟದ ಪ್ರಸವ ಪೂರ್ವ ಆರೈಕೆ" ಕುರಿತು ಒಂದು ದಿನದ ಜಿಲ್ಲಾಮಟ್ಟದ ತರಬೇತಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ತಿಳಿಸಿದ್ದಾರೆ.

### ನ.25ರಂದು ವಿಕಲಚೇತನರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆ

» ಚಿತ್ರದುರ್ಗ

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಇದೇ ನ.25ರಂದು ಬೆಳಿಗ್ಗೆ 10.30ಕ್ಕೆ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ 18 ವರ್ಷ ಮೇಲ್ಪಟ್ಟ ವಿಕಲಚೇತನರಿಗೆ ವಿವಿಧ ರೀತಿಯ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಆಸಕ್ತ ವಿಕಲಚೇತನರು ನಗರದ ಒನಕ ಓಬವ್ವ ಕ್ರೀಡಾಂಗಣದಲ್ಲಿ ನಡೆಯುವ ಜಿಲ್ಲಾ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ಜಿಟಿಟಿಸಿ: ಉಪನ್ಯಾಸಕರ ಹುದ್ದೆಗೆ ಅರ್ಜಿ



» ಚಿತ್ರದುರ್ಗ

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ದೀರ್ಘಾವಧಿ ಕೋರ್ಸ್‌ಗಳು ನಡೆಯುತ್ತಿದ್ದು, ಈ ಕೋರ್ಸ್‌ಗೆ ಅಗತ್ಯವಿರುವ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಅಥವಾ ಬಿಇ (ಮೆಕ್ಯಾನಿಕಲ್) ಅಥವಾ ಎಂಟೆಕ್ (ಮೆಕ್ಯಾನಿಕಲ್) ವಿದ್ಯಾರ್ಹತೆ ಹೊಂದಿರುವ ಒರ್ವ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಚಿತ್ರದುರ್ಗ, ಸರ್ವೆ.ನಂ. 44, ಹಳೆಯ ಬೆಂಗಳೂರು ರಸ್ತೆ, ಕಣಿವೆ ಮಾರಮ್ಮ ದೇವಸ್ಥಾನದ ಹಿಂಭಾಗ, ಕುಂಚಿಗನಾಳ್ ದೂರವಾಣಿ ಸಂಖ್ಯೆ 9738465834, 9481866855, 9945616114 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಟಿಟಿಸಿ ಪ್ರಾಂಶುಪಾಲರು ತಿಳಿಸಿದ್ದಾರೆ.

### ನಾಮನಿರ್ದೇಶನಕ್ಕೆ ಪ್ರಸ್ತಾವನೆಗಳ ಆಹ್ವಾನ

» ಚಿತ್ರದುರ್ಗ

ರಾಜ್ಯ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಬೈಲಾದ ಉಪ ನಿಯಮ 3ರನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ವ ಸದಸ್ಯರ ಸಭೆಯ ಸದಸ್ಯರನ್ನುನಾಮನಿರ್ದೇಶನ ಮಾಡುವ ಸಂಬಂಧ ಪ್ರಸ್ತಾವನೆಗಳ ಆಹ್ವಾನಿಸಲಾಗಿದೆ. ನ.28 ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನವಾಗಿದೆ. ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಗೆ ಸರ್ವ ಸದಸ್ಯರ ಸಭೆಗೆ ಸದಸ್ಯರನ್ನು ನಾಮನಿರ್ದೇಶನ ಮಾಡುವ ಸಲುವಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಮಾಜ ಸೇವಕರು (ಇಬ್ಬರು), ಪರಿಶಿಷ್ಟ ಜಾತಿ, ಪರಿಶಿಷ್ಟಪಂಗಡ (ಒಬ್ಬರು), ಮಹಿಳಾ ಪ್ರತಿನಿಧಿಗಳು (ಇಬ್ಬರು) ಹಾಗೂ ಅಲ್ಪಸಂಖ್ಯಾತರ ಪ್ರತಿನಿಧಿಗಳು (ಒಬ್ಬರು) ಸೇವೆ ಸಲ್ಲಿಸುರುವವರು ಅವರ ವಿವರಗಳನ್ನೊಳಗೊಂಡ ಸೂಕ್ತ ಪ್ರಸ್ತಾವನೆಯನ್ನು ಇದೇ ನ.28ರ ಸಂಜೆ 5.30ರೊಳಗೆ ಕಾರ್ಮಿಕ ಅಧಿಕಾರಿ, ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಎಸ್‌ಬಿಐ ಬ್ಯಾಂಕ್ ಮೇಲ್ಭಾಗ, ಜೆ.ಸಿ.ಆರ್.ಬಡಾವಣೆ ಮುಖ್ಯರಸ್ತೆ, ಚಿತ್ರದುರ್ಗ ಕಚೇರಿಗೆ ಸಲ್ಲಿಸಬೇಕು.

## ಫಾಸ್ಟ್ ನ್ಯೂಸ್

### ಪುಸ್ತಕಗಳ ಆಯ್ಕೆಗಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಕನ್ನಡ, ಆಂಗ್ಲ ಮತ್ತು ಭಾರತೀಯ ಇತರೆ ಭಾಷೆಗಳ ಪುಸ್ತಕಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. 2024ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಸಾಹಿತ್ಯ, ಕಲೆ, ವಿಜ್ಞಾನ, ಪಠ್ಯ, ವೃತ್ತಿ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆದಾಯ ಉತ್ಪಾದನಾ ಯೋಜನೆ, ಮಕ್ಕಳ ಸಾಹಿತ್ಯ, ಸ್ಪರ್ಧಾತ್ಮಕ, ಪಠ್ಯಪುಸ್ತಕ, ಸಾಂದರ್ಭಿಕ ಮತ್ತು ಇತ್ಯಾದಿ ವಿಷಯಗಳ ಕನ್ನಡ, ಆಂಗ್ಲ ಮತ್ತು ಭಾರತೀಯ ಇತರೆ ಭಾಷೆಗಳ ಪುಸ್ತಕಗಳ ಆಯ್ಕೆಗಾಗಿ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳಿಂದ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. 2024ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯ ಕಬ್ಬನ್ ಉದ್ಯಾನವನ, ಬೆಂಗಳೂರಿನಲ್ಲಿ ಪುಸ್ತಕಗಳ ನೋಂದಣಿ ಅಧಿನಿಯಮದಡಿ ಸಲ್ಲಿಸಲಾಗುವ ಪ್ರತಿ ಗ್ರಂಥದ ಮೂರು ಪ್ರತಿಗಳಲ್ಲಿ ಒಂದು ಪ್ರತಿಯನ್ನು ನಿಯಮಾನುಸಾರ ಈ ಕಚೇರಿಗೆ ಪಡೆದು ಪುಸ್ತಕಗಳನ್ನು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ಪ್ರಥಮ ಮುದ್ರಣಗೊಂಡ ವರ್ಷದಿಂದ ಕನಿಷ್ಟ 10 ವರ್ಷಗಳ ಅವಧಿಯ ನಂತರ ಮರು ಮುದ್ರಣಗೊಳ್ಳುವ, ಪರಿಷ್ಕೃತ ಮುದ್ರಣಗೊಳ್ಳುವ ಉತ್ತಮ ಪುಸ್ತಕಗಳನ್ನು ಓದುಗರ ಬೇಡಿಕೆಗೆ ಅನುಗುಣವಾಗಿ ಆಯಾ ಪ್ರಾಧಿಕಾರಗಳ ಅಧಿಕಾರಿಗಳ, ಪ್ರಾಧಿಕಾರದ ವಿವೇಚನಾ ಕೋಟಾದಡಿ ಸರ್ಕಾರ ನಿಗಧಿಪಡಿಸಿದ ಅಳತೆಗಳಿಗೆ ಅನುಗುಣವಾಗಿ ಬೆಲೆ ನಿಗಧಿಪಡಿಸಿಕೊಂಡು ನೇರವಾಗಿ ಖರೀದಿಸಲು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ. 2024ರಲ್ಲಿಕರ್ನಾಟಕದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ 2025ರ ಜನವರಿ 1 ಸಂಜೆ 5.30ರೊಳಗೆ ಹಾಗೂ ಹೊರ ರಾಜ್ಯಗಳಲ್ಲಿ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ, ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೊಂದಣಿ ಕೇಂದ್ರಗಳಲ್ಲಿ ನೊಂದಣಿ ಮಾಡಿಸಬೇಕು. ನೊಂದಣಿ ಮಾಡಿಸಿದ ನಕಲು ಪತ್ರದ ಪ್ರತಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು 2025ರ ಜನವರಿ 2ರ ಸಂಜೆ 5.30ರೊಳಗೆ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸತಕ್ಕದ್ದು. ಅಂತಿಮ ದಿನಾಂಕದ ನಂತರ ನೊಂದಣಿಯಾಗುವ ಪುಸ್ತಕಗಳನ್ನು ಆಯ್ಕೆಗೆ ಪರಿಗಣಿಸಲಾಗುದಿಲ್ಲ. 2024 ಜನವರಿ ಅವಧಿಯಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳ 2024ರಲ್ಲಿ ಪ್ರಕಟಗೊಂಡ ಪುಸ್ತಕಗಳ ಆಯ್ಕೆಗೆ ಪ್ರತ್ಯೇಕವಾಗಿ ಆಯುಕ್ತರ ಕಚೇರಿಯಲ್ಲಿ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುದಿಲ್ಲ. ಆಯ್ಕೆ ಸಮಿತಿಗೆ ಇಚ್ಚಿಸುವ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದು. ನೊಂದಣಿ, ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ www.dpl.karnataka.gov.inನ್ನುಸಂಪರ್ಕಿಸಬಹುದು. ಅರ್ಜಿಗಳು ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ನಗರ ಗ್ರಂಥಾಲಯ ಕಚೇರಿಗಳಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 080-22864990 ಗೆ ಸಂಪರ್ಕಿಸಬಹುದು ಎಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಸ್ಪತ್ರೆಯಲ್ಲಿ ಲಭ್ಯವಿರುವ ಎಬಿಆರ್‌ಕೆ ಸೌಲಭ್ಯ ಸದುಪಯೋಗ ಪಡೆದುಕೊಳ್ಳಿ: ರವೀಂದ್ರ

» **ಚಿತ್ರದುರ್ಗ**

ಜಿಲ್ಲಾಸ್ಪತ್ರೆಯಲ್ಲಿ ಲಭ್ಯವಿರುವ ಎಬಿಆರ್‌ಕೆ ಸೌಲಭ್ಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಕೋರಿದ್ದಾರೆ. ಜಿಲ್ಲಾಸ್ಪತ್ರೆಗೆ ಬರುವಾಗ ರೋಗಿಗಳು ತಪ್ಪದೇ ಆಧಾರ್ ಕಾರ್ಡ್, ರೇಷನ್ ಕಾರ್ಡ್ ನಕಲು ಪ್ರತಿಗಳನ್ನು ತೆಗೆದುಕೊಂಡು ಬರಬೇಕು. ಒಳ ರೋಗಿಗಳಾಗಿ ದಾಖಲಾಗುವ ಸಂದರ್ಭದಲ್ಲಿ ತಪ್ಪದೇ ಎ.ಬಿ.ಆರ್.ಕೆ ಕೊಠಡಿಯಲ್ಲಿ ನೊಂದಣಿ ಮಾಡಿಸಬೇಕು. ಈ ಯೋಜನೆಯಡಿ ನೊಂದಣಿಯಾದ ಅರ್ಹ ಫಲಾನುಭವಿಗೆ ಜಿಲ್ಲಾಸ್ಪತ್ರೆಯಲ್ಲಿ ಲಭ್ಯವಿರುವ ರಕ್ತ ಪರೀಕ್ಷೆ, ಸಿ.ಟಿ.ಸ್ಕ್ಯಾನ್, ಎಕ್ಸ್-ರೇ, ಸ್ಕ್ಯಾನಿಂಗ್, ಆರ್ಥೋ ಇಂಪ್ಲಾಂಟ್, ಔಷಧಿ ಮತ್ತು ಮಾತ್ರೆಗಳನ್ನು ಉಚಿತವಾಗಿ ನೀಡಲಾಗುವ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ರೋಗಿಗಳು ಇತ್ತೀಚೆಗೆ ನೇರವಾಗಿ ಖಾಸಗಿ ಆಸ್ಪತ್ರೆಗಳಿಗೆ ತೆರಳಿ ತದನಂತರ ರೆಫರಲ್‌ಗಾಗಿ ಇಲ್ಲಿನ ವೈದ್ಯಾಧಿಕಾರಿಗಳಿಗೆ ಒತ್ತಡ ತರುತ್ತಿದ್ದಾರೆ. ಆದ್ದರಿಂದ ಈ ರೀತಿ ಮಾಡದೇ ಮೊದಲು ಸರ್ಕಾರಿ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಿರಿ. ಒಂದು ವೇಳೆ ಚಿಕಿತ್ಸೆ ಲಭ್ಯವಿಲ್ಲದಿದ್ದಾಗ ಮಾತ್ರ ಎ.ಬಿ.ಆರ್.ಕ ಅಡಿಯಲ್ಲಿ ರೆಫರಲ್ ಮಾಡಿಕೊಡಲಾಗುತ್ತದೆ. ಹಾಗೆಯೇ ರೋಗಿಗಳು ಆಸ್ಪತ್ರೆಯಲ್ಲಿ ಯಾವುದೇ ಮಧ್ಯವರ್ತಿಗೆ ಹಣ ನೀಡಬೇಕಾಗಿಲ್ಲ. ಒಂದು ವೇಳೆ ಯಾರಾದರು ಹಣ ಕೇಳಿದಲ್ಲಿ ಜಿಲ್ಲಾ ಶಸ್ತ ಚಿಕಿತ್ಸಕ ಎಸ್.ಪಿ.ರವೀಂದ್ರ ದೂರವಾಣಿ ಸಂಖ್ಯೆ 9448943163 ಗೆ ಸಂಪರ್ಕಿಸಿ ದೂರು ನೀಡಬಹುದು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

# ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ: ಡಿ.01 ರಿಂದ ನೋಂದಣಿ ಕಾರ್ಯ ಶುರು



» **ಚಿತ್ರದುರ್ಗ**

ಪ್ರಸಕ್ತ ಮುಂಗಾರು ಹಂಗಾಮಿನ ರಾಗಿ ಬೆಳೆಯನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ಡಿಸೆಂಬರ್ 01 ರಿಂದ ನೋಂದಣಿ ಕಾರ್ಯ ಪ್ರಾರಂಭಿಸಲಾಗುವುದು. ಡಿ.31 ರವರೆಗೆ ನೋಂದಣಿ ನಡೆಯಲಿದೆ. ಪ್ರತಿ ಕ್ವಿಂಟಾಲ್ ರಾಗಿಗೆ ರೂ.4290 ದರ ನಿಗದಿ ಮಾಡಲಾಗಿದೆ. ಮುಂಬರುವ ಜನವರಿ 01 ರಿಂದ ಮಾರ್ಚ್ 31 ರವರೆಗೆ ಖರೀದಿ ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಕನಿಷ್ಠ ಬೆಂಬಲ ಬೆಲೆ ಯೋಜನೆ ಕಾರ್ಯಾಚರಣೆಗೆ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಹೊಸದುರ್ಗ, ಹೊಳಲ್ಕೆರ ಹಾಗೂ ಚಿತ್ರದುರ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿ ಹೆಚ್ಚು ರಾಗಿ ಬಿತ್ತನೆಯಾಗಿದೆ. ಉತ್ತಮ ಇಳುವರಿಯ ನಿರೀಕ್ಷೆ ಇದ್ದು, ಹೊಸದುರ್ಗ ತಾಲ್ಲೂಕಿನಲ್ಲಿ ಹೆಚ್ಚುವರಿಯಾಗಿ ರಾಗಿ ಖರೀದಿ ಕೇಂದ್ರ ಸ್ಥಾಪಿಸಬೇಕು. ನೇರವಾಗಿ ರೈತರಿಂದಲೇ ರಾಗಿ ಖರೀದಿ ಮಾಡಲಾಗುವುದು. ರಾಗಿ ಮಾರಾಟ ಮಾಡುವ ರೈತರ ಪಹಣಿಯಲ್ಲಿ ರಾಗಿ ಎಂದು ನಮೂದು ಆಗಿರುವುದು ಕಡ್ಡಾಯವಾಗಿದೆ. ಮದ್ಯವರ್ತಿಗಳಿಗೆ ಅವಕಾಶವಿಲ್ಲ ಎಂದು ತಿಳಿಸಿದರು.

ರಾಗಿ ಖರೀದಿ ಕೇಂದ್ರಗಳಲ್ಲಿ ಅಗತ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕು. ಸರ್ಕಾರದಿಂದ ನೇಮಿಸಲ್ಪಟ್ಟ ಸಂಗ್ರಹಣಾ ಏಜೆನ್ಸಿಗಳು ಕೇಂದ್ರ ಸರ್ಕಾರ ನಿಗದಿಪಡಿಸಿದ ಮಾನದಂಡಗಳ ಅನ್ವಯ ಎಫ್.ಎ.ಕ್ಯೂ ಗುಣಮಟ್ಟ ಆಧರಿಸಿ ರಾಗಿ ಖರೀದಿಸಬೇಕು. ಪ್ರತಿ ಖರೀದಿ ಕೇಂದ್ರದಲ್ಲೂ ಕೃಷಿ ಇಲಾಖೆಯಿಂದ ಗ್ರೇಡರ್‌ಗಳನ್ನು ನೇಮಿಸಬೇಕು. ಈ ಗ್ರೇಡರ್‌ಗಳು ರಾಗಿ ಗುಣಮಟ್ಟವನ್ನು ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನೇಮಿಸಿರುವ ಗುಣಮಟ್ಟ ಪರೀಕ್ಷಕರೊಂದಿಗೆ ಜಂಟಿಯಾಗಿ ರಾಗಿ ಗುಣಮಟ್ಟ ಧೃಡೀಕರಿಸಬೇಕು. ರಾಗಿ ಖರೀದಿ ಹಾಗೂ ಮಾನದಂಡಗಳ ಕುರಿತು ವ್ಯಾಪಕ ಪ್ರಚಾರದೊಂದಿಗೆ ರೈತರಿಗೆ ತಿಳಿಸಬೇಕು. ಎಲ್ಲಾ ಖರೀದಿ ಕೇಂದ್ರಗಳಲ್ಲಿ ರೈತರ ಬೆಳೆಗಳ ದಾಸ್ತಾನು ಮಾಡಲು ವ್ಯವಸ್ಥೆ ಕಲ್ಪಿಸಬೇಕು. ಇದರೊಂದಿಗೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಬೇಕು. ರೈತರ ಫ್ರೂಟ್ಸ್ ದಾಖಲೆಗಳ ಮೂಲಕ ನೋಂದಣಿ ಮಾಡುವಲ್ಲಿ ಯಾವುದೇ ಗೊಂದಲಗಳು ಉಂಟಾಗಬಾರದು. ರೈತರ ಪಹಣಿಯಲ್ಲಿ ಬೆಳೆ ನಮೂದು ಮಾಡುವಲ್ಲಿ ವ್ಯತ್ಯಾಸ ಕಂಡುಬಂದರೆ ಸಂಬಂಧಪಟ್ಟ ಗ್ರಾಮಲೆಕ್ಕಾಧಿಕಾರಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಖರೀದಿ ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು. ಕೃಷಿ ಇಲಾಖೆ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರಾಗಿ ಖರೀದಿ ಕುರಿತು ರೈತರಿಗೆ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್ ಮಾತನಾಡಿ, 2022-23ನೇ ಸಾಲಿನಲ್ಲಿ ರೂ.3578 ಬೆಂಬಲ ಬೆಲೆಯಡಿ ಒಟ್ಟು 21,715 ಮೆಟ್ರಿಕ್ ಟನ್ ಹಾಗೂ 2023-24ನೇ ಸಾಲಿನಲ್ಲಿ ರೂ.3846 ಬೆಂಬಲ ಬೆಲೆಯಡಿ 1832.60 ಮೆಟ್ರಿಕ್ ಟನ್ ರಾಗಿ ಖರೀದಿ ಮಾಡಲಾಗಿತ್ತು. ಈ ಬಾರಿ ರಾಗಿಗೆ ರೂ.4290 ಬೆಂಬಲ ಬೆಲೆ ನಿಗದಿ ಮಾಡಲಾಗಿದೆ. ಚಿತ್ರದುರ್ಗ, ಹೊಳಲ್ಕೆರೆ, ಹೊಸದುರ್ಗ ಹಾಗೂ ಶ್ರೀರಾಂಪುರ ಎ.ಪಿ.ಎಂ.ಸಿ ಯಾರ್ಡ್‌ಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗುವುದು. ಹಿರಿಯೂರು ಹಾಗೂ ಹೊಸದುರ್ಗ ತಾಲ್ಲೂಕಿನಲ್ಲಿ ಹೆಚ್ಚಿನ ಬೇಡಿಕೆ ಎದುರಾದರೆ ಹೆಚ್ಚುವರಿ ಖರೀದಿ ಕೇಂದ್ರಗಳನ್ನು ಸಹ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಡಿವೈಎಸ್‌ಪಿ ದಿನಕರ್ ಸೇರಿದಂತೆ ತಹಶೀಲ್ದಾರ್‌ಗಳು, ಎ.ಪಿ.ಎಂ.ಸಿ ಕಾರ್ಯದರ್ಶಿಗಳು ಇದ್ದರು.

## ಮಕ್ಕಳಿಗೆ ಪಿಸಿವಿ ಲಸಿಕೆ ಹಾಕಿಸಿ, ನ್ಯೂಮೋನಿಯಾ ನಿಯಂತ್ರಿಸಿ: ಟಿಹೆಚ್‌ಒ ಡಾ.ಬಿ.ವಿ.ಗಿರೀಶ್

» **ಚಿತ್ರದುರ್ಗ**



ತಪ್ಪದೇ ನಿಮ್ಮ ಮಕ್ಕಳಿಗೆ ಪಿಸಿವಿ ಲಸಿಕೆ ಹಾಕಿಸಿ ನ್ಯೂಮೋನಿಯಾ ನಿಯಂತ್ರಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ನಗರದ ಮಾರುತಿ ನಗರದ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಜೆ.ಸಿ.ಆರ್ ಬಡಾವಣೆ 7ನೇ ಅಡ್ಡರಸ್ತೆಯಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಲಸಿಕಾ ಕಾರ್ಯಕ್ರಮದೊಂದಿಗೆ ಸಾನ್ಸ್ ಕಾರ್ಯಕ್ರಮ ಸಾಮಾಜಿಕ ಅರಿವು ಚಟುವಟಿಕೆಗಳ ಮೂಲಕ ನಿಮೋನಿಯಾ ರೋಗ ಪರಿಣಾಮಕಾರಿಯಾಗಿ ನಿಯಂತ್ರಣ ಸಂಬಂಧ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನ್ಯುಮೋನಿಯಾ ಬ್ಯಾಕ್ಟೀರಿಯಾ, ವೈರಲ್ ಅಥವಾ ಫಂಗಲ್ ಸೋಂಕಿನಿಂದ ಉಂಟಾಗುವ ನಿಮ್ಮ ಶ್ವಾಸಕೋಶದಲ್ಲಿ ಉರಿಯೂತ ಮತ್ತು ದ್ರವವಾಗಿದೆ. ಇದು ಉಸಿರಾಡಲು ಕಷ್ಟವಾಗುತ್ತದೆ ಮತ್ತು ಹಳದಿ, ಹಸಿರು ಅಥವಾ ರಕ್ತಸಿಕ್ತ ಲೋಳೆಯೊಂದಿಗೆ ಜ್ವರ ಮತ್ತು ಕೆಮ್ಮ ಉಂಟುಮಾಡಬಹುದು. ಫ್ಲೂ, ಕೋವಿಡ್-19 ಮತ್ತು ನ್ಯುಮೋಕೊಕಲ್ ಕಾಯಿಲೆಗಳು ನ್ಯುಮೋನಿಯಾಕ್ಕೆ ಸಾಮಾನ್ಯ ಕಾರಣಗಳಾಗಿವೆ ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಪ್ರತಿ ವರ್ಷ ನವೆಂಬರ್ 14ರಂದು ವಿಶ್ವ ನಿಮೋನಿಯಾ ದಿನ ಆಚರಿಸಲಾಗುತ್ತದೆ. ಈ ಬಾರಿ ಈ ಕಾರ್ಯಕ್ರಮ ಸಾನ್ಸ್ ಕಾರ್ಯಕ್ರಮ ಸಾಮಾಜಿಕ ಅರಿವು ಚಟುವಟಿಕೆಗಳ ಮೂಲಕ ನ್ಯೂಮೋನಿಯಾ ರೋಗ ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಎಂದಾಗಿದೆ

ಸಾರ್ವಜನಿಕರು ಮಕ್ಕಳಲ್ಲಿ ಉಸಿರು ಗಟ್ಟಿವಿಕೆ ಪಕ್ಕೆಲಬು ಸೆಳೆತ ಗಮನಿಸಬೇಕು ಇಂತಹ ಸ್ಥಿತಿ ಕಂಡಾಗ ತಕ್ಷಣವೇ ಮಕ್ಕಳನ್ನು ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳ ಬಳಿ ಚಿಕಿತ್ಸೆ ಪಡೆಯಬೇಕು. ನಿಮೋನಿಯಾ ರೋಗವು ಸಾಮಾನ್ಯವಾಗಿ ಬರಲು ಕಾರಣಗಳಾದ ವಾಯುಮಾಲಿನ್ಯ ಪರಿಸರ ಮಾಲಿನ್ಯ ಅಪೌಷ್ಟಿಕತೆ ಮುಖ್ಯವಾಗಿದೆ. ಹಾಗಾಗಿ ಚಳಿ ಮತ್ತು ಮಳೆಗಾಲಗಳಲ್ಲಿ ತಾಯಂದಿರು ಮಕ್ಕಳನ್ನು ಬೆಚ್ಚಗೆ ಇರಿಸಿಕೊಳ್ಳಬೇಕು. ಅಲ್ಲದೆ ಫ್ರಿಜ್ಜಿನಲ್ಲಿಟ್ಟ ಆಹಾರಗಳನ್ನು ಸೇವಿಸಬಾರದು ಗಾಳಿಯೊಂದಿಗೆ ತೇವಾಂಶ ಸೇವಿಸಿದಾಗ ಶ್ವಾಸಕೋಶದ ಸೋಂಕು ತಗಲುತ್ತದೆ ಎಂದು ತಿಳಿಸಿದ ಅವರು, ಹೆಚ್ಚು ಹೆಚ್ಚು ಸಾಮಾಜಿಕ ಅರಿವು ಚಟುವಟಿಕೆಗಳ ಮೂಲಕ ನ್ಯೂಮೋನಿಯಾ ರೋಗ ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಎಂದರು.

ಮಾರುತಿ ನಗರ ನಗರ ಆರೋಗ್ಯ ಕೇಂದ್ರದ ಡಾ.ಯಶಸ್ ಅವರು ಪಕ್ಕೆಲಬು ಸೆಳೆತದ ಪ್ರಾತ್ಯಕ್ಷಿಕೆ ತೋರಿಸಿದರು.

ಕಾರ್ಯಕ್ರಮದಲ್ಲಿ ಮಾರುತಿ ನಗರ ನಗರ ಆರೋಗ್ಯ ಕೇಂದ್ರದ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ತಿಪ್ಪಮ್ಮ, ಕಾತ್ಯಾಯನಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪ್ರವೀಣ್ ಕುಮಾರ್, ನಂದೀಶ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ರೂಪ, ತಾಯಂದಿರು, ಮಕ್ಕಳು, ಅತ್ತೆಯರು ಇದ್ದರು.

## ವಿಭಾಗ ಮಟ್ಟಕ್ಕೆ ಆಯ್ಕೆಯಾದ ಹೊಸದುರ್ಗ ಕಾಲೇಜ್ ವಿದ್ಯಾರ್ಥಿಗಳು



» **ಹೊಸದುರ್ಗ**

ಕರ್ನಾಟಕ ರಾಜ್ಯ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ ಹಾಗು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಮತ್ತು ಶ್ರೀ ಬೃಹನ್ಮಠ ಸಂಯುಕ್ತ ಪದವಿ ಪೂರ್ವ ಕಾಲೇಜು, ಚಿತ್ರದುರ್ಗ ಇವರ ಸಹಯೋಗದೊಂದಿಗೆ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಹೊಸದುರ್ಗದ ವಿದ್ಯಾರ್ಥಿಗಳು ಭಾಗವಹಿಸಿ ಜಿಲ್ಲಾ ಮಟ್ಟದಿಂದ ವಿಭಾಗ ಮಟ್ಟಕ್ಕೆ ಆಯ್ಕೆ ಆಗಿರುತ್ತಾರೆ.

- **ಭಾವಗೀತೆ :** ನಾಗರತ್ನ ಸಿ ಎ, ಪ್ರಥಮ ಸ್ಥಾನ.
- **ಚರ್ಚೆ ಸ್ಪರ್ಧೆ ಕನ್ನಡ:** ತೇಜಸ್ವಿನಿ ಬಿ ಅರ್, ಪ್ರಥಮ ಸ್ಥಾನ.
- **ಚರ್ಚಾಸ್ಪರ್ಧೆ ಇಂಗ್ಲಿಷ್:** ಸಾನಿಯಾ ಫಿರ್ದೋಸ್, ಪ್ರಥಮ ಸ್ಥಾನ.
- **ಚಿತ್ರಕಲೆ :** ಮನೋಜ್ ಎ ,ಪ್ರಥಮ ಸ್ಥಾನ.
- **ಏಕಪಾತ್ರಾಭಿನಯ:** ಸಂಜನಾ ಆರ್ , ದ್ವಿತೀಯ ಸ್ಥಾನ.
- **ಜನಪದ ಗೀತೆ:** ಮಾನ್ಯ ಟಿ, ದ್ವಿತೀಯ ಸ್ಥಾನ.
- **ಪ್ರಬಂಧ ಕನ್ನಡ:** ಸಂಧ್ಯಾ ಕೆ, ತೃತೀಯ ಸ್ಥಾನ ಪಡೆಯಿರುತ್ತಾರೆ. ವಿಜೇತರಾದ ವಿದ್ಯಾರ್ಥಿಗಳಿಗೆ ಉಪನಿರ್ದೇಶಕರು ಶಾಲಾ ಶಿಕ್ಷಣ (ಪದವಿ ಪೂರ್ವ) ಚಿತ್ರದುರ್ಗ ಇವರು ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಈ .ಗುರುಮೂರ್ತಿ ಹಾಗೂ ಕಾಲೇಜಿನ ಸಾಂಸ್ಕೃತಿಕ ಕಾರ್ಯದರ್ಶಿ ಡಾ, ರಂಗಸ್ವಾಮಿ ಎಚ್ ಇವರು ಉಪಸ್ಥಿತರಿದ್ದರು. ಬಹುಮಾನ ಹಾಗೂ ಪ್ರಮಾಣಪತ್ರ ಸ್ವೀಕರಿಸಿದ ವಿದ್ಯಾರ್ಥಿಗಳಿಗೆ ಕಾಲೇಜು ಅಭಿವೃದ್ಧಿ ಸಮಿತಿ ,ಹಾಗೂ ಉಪನ್ಯಾಸಕರು ಹರ್ಷ ವ್ಯಕ್ತಪಡಿಸಿದ್ದಾರೆ.

## ನ.26 ರಂದು ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆ

**ದಾವಣಗೆರೆ:** ವಿಶ್ವ ವಿಕಲಚೇತನರ ದಿನಾಚರಣೆ-2024ರ ಪ್ರಯುಕ್ತ ನ.26 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗುಂಡಿ ಸರ್ಕಲ್ ಹತ್ತಿರವಿರುವ ಮೋತಿ ವೀರಪ್ಪ ಕಾಲೇಜು ಮೈದಾನದಲ್ಲಿ ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಮಹಿಳಾ ಮತ್ತು ಪುರಷರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳನ್ನು ನಡೆಸಲಾಗುತ್ತದೆ. ಕ್ರೀಡಾ ಸ್ಪರ್ಧೆಯಲ್ಲಿ ದೈಹಿಕ ವಿಕಲಚೇತನರಿಗೆ ನಿಧಾನಗತಿ ಬೈಕ್ ರೇಸ್, ಶಾಟ್‌ಪುಟ್, ಜಾವಲಿನ್ ಥ್ರೋ, ಮ್ಯೂಸಿಕಲ್ ಚೇರ್ (ಮಹಿಳೆಯರಿಗೆ), ಸಂಪೂರ್ಣ ದೃಷ್ಟಿದೋಷವುಳ್ಳವರಿಗೆ - 50ಮೀ. ರನ್ನಿಂಗ್ ರೇಸ್, ಶಾಟ್‌ಪುಟ್, ಮ್ಯೂಸಿಕಲ್ ಚೇರ್, ಚೆಸ್, ಭಾಗಶಃ ಅಂಧರಿಗೆ- ಕೇರಂ, ವಾಕ್ ಮತ್ತು ಶ್ರವಣದೋಷವುಳ್ಳವರಿಗೆ □100ಮೀ ರನ್ನಿಂಗ್ ರೇಸ್, ಜಾವಲಿನ್ ಥ್ರೋ, ಶಾಟ್ ಪುಟ್, ಕೇರಂ, ಚೆಸ್ ಬೆನ್ನುಹುರಿ ಅಪಘಾತ ಹೊಂದಿರುವವರಿಗೆ □ ಚೆಸ್, ಕೇರಂ ಮತ್ತು ವ್ಹೀಲ್‌ಚೇರ್ ರೇಸ್, ಏರ್ಪಡಿಸಿದ್ದು, ಆಸಕ್ತ ವಿಕಲಚೇತನರು ಹತ್ತಿರದ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಕರೆಮಾಡಿ ನೋಂದಣಿ ಮಾಡಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ದಾವಣಗೆರೆ ದೂ.ಸಂ: 08192-263936 ನ್ನು ಸಂಪರ್ಕಿಸಬಹುದು.

**ಪ್ರಮುಖ ಸುದ್ದಿ**

# ನವೆಂಬರ್ 26 ರಂದು ಸಂವಿಧಾನ ದಿನಾಚರಣೆ

» **ದಾವಣಗೆರೆ**



ಜಿಲ್ಲಾಡಳಿತದಿಂದ ಇದೇ ನ. 26 ರಂದು ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಿ.ಆರ್ ಅಂಬೇಡ್ಕರ್ ನೆನಪಿಗಾಗಿ ಸಂವಿಧಾನ ದಿನಾಚರಣೆಯನ್ನು ಬಹಳ ಅರ್ಥಪೂರ್ಣ ಆಚರಣೆಗೆ ಎಲ್ಲ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅವರು ಸೂಚನೆ ನೀಡಿದರು.

ಶುಕ್ರವಾರ (22) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಸಂವಿಧಾನ ದಿನಾಚರಣೆಯ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತಾನಾಡಿದರು. ನವಂಬರ್ 26 ರಂದು ಕಾರ್ಯಕ್ರಮವನ್ನು ಕುಂದುವಾಡ ಕೆರೆಯ ಗ್ಲಾಸ್ ಹೌಸ್ ನಲ್ಲಿ ಆಚರಿಸುವಂತೆ ಜಿಲ್ಲಾಧಿಕಾರಿಯವರು ಅಧಿಕಾರಿಗಳಿಗೆ ಸೂಚಿಸಿದರು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆಯನ್ನು ಮುದ್ರಿಸಿ ಮತ್ತು ವಿತರಣೆ ಮಾಡಿ, ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಜಿಲ್ಲೆಯ ಎಲ್ಲಾ ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಹಾಗೂ ಗಣ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕೆಂದರು.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸದಸ್ಯರು ಹಾಗೂ ಪ್ರಾಂಶುಪಾಲರಾದ ಪ್ರೊ. ಮಲ್ಲಿಕಾರ್ಜುನ್ ಮತ್ತು ರುದ್ರಪ್ಪ ಹನಗವಾಡಿ ಇವರಿಂದ ಉಪನ್ಯಾಸ ನೀಡುವರು. ಕಾರ್ಯಕ್ರಮದ ವೇದಿಕೆಯಲ್ಲಿ ಸಂವಿಧಾನ ಪೀಠಿಕೆ ಓದಬೇಕು.

ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಎಲ್ಲಾ ಹಾಸ್ಟೆ□□ಗಳ ವಿದ್ಯಾರ್ಥಿಗಳನ್ನು ಕರೆದುಕೊಂಡು ಬರಬೇಕೆಂದರು. ಅತಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಶಿಕ್ಷಣ ಇಲಾಖೆ ನೋಡಿಕೊಳ್ಳಬೇಕು ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಕೆ.ಎಸ್.ಆರ್.ಟಿ.ಸಿ.ಯಿಂದ ಬಸ್ ವ್ಯವಸ್ಥೆ ಮಾಡಬೇಕು.

ಅಂಬೇಡ್ಕರ್ ರವರ ಜೀವನ ಚರಿತ್ರೆಯ ಭಾರತ ಭಾಗ್ಯವಿದಾತ, ಜೈಭೀಮ, ಬಾಲಕ ಅಂಬೇಡ್ಕರ್ ಕುರಿತು ಚಲನಚಿತ್ರವನ್ನು ವಿದ್ಯಾರ್ಥಿಗಳಿಗೆ ವೀಕ್ಷಣೆಯ ಮಾಡಲು ಚಲನಚಿತ್ರ ಮಂದಿರಗಳಿಗೆ ಅವಕಾಶ ನೀಡಬೇಕು ಎಂದರು.

ವಿದ್ಯಾರ್ಥಿಗಳಿಗೆ ಸಂವಿಧಾನದ ಕುರಿತು ಅರಿವು ಮೂಡಿಸಲು ಸಂವಿಧಾನದ ಕುರಿತು ಪ್ರಬಂಧ ಸ್ಪರ್ಧೆಯನ್ನು ಶಾಲಾ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಏರ್ಪಡಿಸಿ ತಾಲ್ಲೂಕುವಾರು ಒಬ್ಬ ವಿದ್ಯಾರ್ಥಿಯನ್ನು ಆಯ್ಕೆಮಾಡಬೇಕೆಂದರು.

ಹಾಗೂ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕ್ರೈಸ್ ವಸತಿ ಶಾಲೆಗಳಿಂದ ವಿದ್ಯಾರ್ಥಿಗಳಿಗೆ ಸಂವಿಧಾನದ ಕುರಿತು ಅರಿವು ಮೂಡಿಸುಲು ಸಂವಿಧಾನ ಕುರಿತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಿ ತಾಲ್ಲೂಕುವಾರು ಒಬ್ಬ ವಿದ್ಯಾರ್ಥಿಯನ್ನು ಆಯ್ಕೆ ಮಾಡಿ, ಭಾರತ ಸಂವಿಧಾನದ ಜಾಗೃತಿ ಮೂಡಿಸುವ ಸಲುವಾಗಿ ದಾವಣಗೆರೆ ಮಹಾನಗರ ಪಾಲಿಕೆಯ ಪ್ರಸಿದ್ಧ ಉದ್ಯಾನವನ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಎದುರುಗಡೆ ಇರುವ ವಿಶ್ವೇಶ್ವರಯ್ಯ ಪಾರ್ಕ್ ನಲ್ಲಿ ಸಂವಿಧಾನ ಪೀಠಿಕೆಯನ್ನು ಕನ್ನಡ ಹಾಗೂ ಆಂಗ್ಲ ಭಾಷೆಯಲ್ಲಿ ಕೆತ್ತನೆ ಮಾಡಿ ನಿರ್ಮಿಸಿ, ಜ.26 ರಂದು ಪೀಠಿಕೆಯನ್ನು ಉದ್ಘಾಟಿಸಿ ಪ್ರಚಾರಾಂದೋಲನ ಕೈಗೊಳ್ಳಬೇಕೆಂದರು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿ.ಪಂ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ನಾಗರಾಜ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರವಿಚಂದ್ರ, ಡಿಡಿಪಿಐ ಕೊಟ್ರೇಶ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಎನ್.ಗುರುಪಾದಮ್ಮ ಅವರಿಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ಬೆಂಗಳೂರು ಮಲ್ಲೇಶ್ವರಂನ ಎಂಎಲ್‌ಎ ಪಿಯು ಕಾಲೇಜು ಕನ್ನಡ ಉಪನ್ಯಾಸಕರಾದ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ತವನಿಧಿ ಗ್ರಾಮದ ಲಲಿತಮ್ಮ ಹಾಗೂ ನೀಲಕಂಠಯ್ಯ ಅವರ ಮಗಳಾದ ಎನ್. ಗುರುಪಾದಮ್ಮ ವೀರಭದ್ರಪ್ಪ (ಉಷಾ ತವನಿಧಿ) ಅವರಿಗೆ ಕನ್ನಡ ವಿಷಯದಲ್ಲಿ ಕುವೆಂಪು ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ. ಕುವೆಂಪು ವಿಶ್ವವಿದ್ಯಾಲಯದ ಕನ್ನಡ ಭಾರತಿ ಸಹ ಪ್ರಾಧ್ಯಾಪಕ ಡಾ.ನಲ್ಲಿಕಟ್ಟೆ ಸಿದ್ದೇಶ್ ಅವರ ಮಾರ್ಗದರ್ಶನದಲ್ಲಿ "ನವೋದಯ ಕಾವ್ಯ : ಮಾತೃತ್ವದ ಸಂಕಥನಗಳು" ಎಂಬ ವಿಷಯ ಕುರಿತು ಮಂಡಿಸಿದ ಸಂಶೋಧನಾ ಪ್ರಬಂಧಕ್ಕೆ ಕುವೆಂಪು ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿಗೆ ಅಂಗೀಕರಿಸಿದೆ.

### ಎಸ್.ಆನಂದ್‌ಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ನಗರದ ಚಂದ್ರವಳ್ಳಿ ಎಸ್‌ಜೆಎಂ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಸಮಾಜಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಎಸ್.ಆನಂದ್ ಅವರಿಗೆ ಸಮಾಜಶಾಸ್ತ್ರ ವಿಷಯದಲ್ಲಿ ದ್ರಾವಿಡಿಯನ್ ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ. ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯ ಸಹ್ಯಾದ್ರಿ ಕಲಾ ಕಾಲೇಜು ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಎಂ.ಪೂರ್ವಚಾರ್ ಮಾರ್ಗದರ್ಶನದಲ್ಲಿ "ಚಿತ್ರದುರ್ಗ ಮುರುಘಾಮಠದ ಜಾತ್ಯಾತೀತ ತತ್ವಗಳ ಒಂದು ಸಮಾಜಶಾಸ್ತ್ರೀಯ ಅಧ್ಯಯನ" ಎಂಬ ವಿಷಯದ ಕುರಿತು ಮಂಡಿಸಿದ ಸಂಶೋಧನಾ ಪ್ರಬಂಧಕ್ಕೆ ದ್ರಾವಿಡಿಯನ್ ವಿಶ್ವವಿದ್ಯಾಲಯ ಪಿಹೆಚ್‌ಡಿ ಪದವಿ ನೀಡಿದೆ.

### ನ.23ರಂದು "ಪುಟುರೆ" ಕಾದಂಬರಿ ಲೋಕಾರ್ಪಣೆ

» ಚಿತ್ರದುರ್ಗ

ನಗರದ ಬಂಜಾರ ಭವನದಲ್ಲಿ ಇದೇ ನ.23ರಂದು ಬೆಳಿಗ್ಗೆ 11.30ಕ್ಕೆ ಬಂಜಾರ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಒಳಗೊಂಡ ಡಾ.ಕೆ.ಮಂಜುನಾಥ್ ನಾಯಕ್ ಅವರು ರಚಿಸಿರುವ "ಪುಟುರೆ" ಕಾದಂಬರಿ ಲೋಕಾರ್ಪಣೆ ಹಾಗೂ ಕರ್ನಾಟಕ ತಾಂಡಅಭಿವೃದ್ಧಿನಿಗಮದಅಧ್ಯಕ್ಷಎನ್.ಜಯದೇವ ನಾಯ್ಕ ಅವರಿಗೆ ಗೌರವಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಹಾಗೂ ಶ್ರೀನಂದ ಮಸಂದ್ ಸೇವಾಲಾಲ್ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಜಿಲ್ಲಾ ಪಂಚಾಯತ್ ಸ್ಥಾಯಿ ಸಮಿತಿ ಮಾಜಿ ಅದ್ಯಕ್ಷ ಜಿ.ರಾಜಾ ನಾಯ್ಕ ಅಧ್ಯಕ್ಷತೆ ವಹಿಸುವರು. ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್.ಜಯದೇವ ನಾಯ್ಕ ಕೃತಿ ಬಿಡುಗಡೆ ಮಾಡುವರು. ನಿವೃತ್ತ ಸಹ ಪ್ರಾಧ್ಯಾಪಕಿ ಡಾ.ಪಿ.ಯಶೋಧ ರಾಜಶೇಖರಪ್ಪ ಅವರು ಕೃತಿ ಕುರಿತು ಮಾತನಾಡುವರು. ಮುಖ್ಯ ಅತಿಥಿಗಳಾಗಿ ಎಂಕು ಸಾದ್ ಸ್ವಾಮೀಜಿ ಹಾಗೂ ಪಿಡಬ್ಲ್ಯೂಡಿ ಪ್ರಥಮ ದರ್ಜೆ ಗುತ್ತಿಗೆದಾರ ಜಿ.ಮಾಧವ ನಾಯ್ಕ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ಮತ್ತು ಯರಗುಂಟ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಮಂಡಿಪೇಟೆ ಫೀಡರ್ ಮತ್ತು ಯರಗುಂಟ ಎಫ್–06 ಶಿವಾಲಿ,ಎಫ್–07 ಶಿವನಗರ ಮತ್ತು ಎಫ್–16 ಎಸ್ ಜೆಎಂ,ವಿಜಯನಗರ ,ಎಸ್ ಟಿ ಪಿ ಮಾರ್ಗದ ವ್ಯಾಪ್ತಿಯಲ್ಲಿ ತುರ್ತು ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ನವಂಬರ್ 23 ರಂದು ಬೆಳಿಗ್ಗೆ 10 ರಿಂದ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.ರೆಹಮಾನ್ ರಸ್ತೆ, ಮಂಡಕ್ಕಿ ಭಟ್ಟಿ 1ನೇ ಕ್ರಾಸ್‌ನಿಂದ 10ನೇ ಕ್ರಾಸ್‌ವರೆಗೆ, ರಿಂಗ್‌ರಸ್ತೆ, ಸಿದ್ದರಾಮೇಶ್ವರ ಬಡಾವಣೆ, ಕಾರ್ಲಮಾರ್ಕ್ಸ್ ನಗರ, ಪೊಲೀಸ್ ದೇವರಾಜ್ ಕ್ವಾರ್ಟಸ್(ಬೇತೂರ್ ರಸ್ತೆ) ಮಂಡಿಪೇಟೆ, ಅಶೋಕ ಟಾಕೀಸ್, ಬಿನ್ನಿ ಕಂಪನಿ ರಸ್ತೆ, ಮಹಾವೀರ , ಕೆಆರ್ ರಸ್ತೆ, , ಗಡಿಯಾರ ಕಂಬ, ಬಿಟಿ ಗಲ್ಲಿ, ಬೆಳ್ಳೂಡಿ ಗಲ್ಲಿ, ಇಸ್ಲಾಂಪೇಟೆ, ಹೆರಿಗೆ ಆಸ್ಪತ್ರೆ, ಪೋಸ್ಟ್ ಆಫೀಸ್, ರೈಲ್ವೇ ಸ್ಟೇಷನ್, ವಿಜಯಲಕ್ಷ್ಮೀ ರಸ್ತೆ ಸ್ವಲ್ಪಭಾಗ, ವಸಂತ ಟಾಕೀಸ್ ಸ್ವಲ್ಪಭಾಗ,ಎಸ ಪಿ ಎಸ ನಗರ , ಬಿ ಎನ್ –1 ಲೇಔಟ್ , ಭಾಷಾ ನಗರ , ಚೌಡೇಶ್ವರಿ ನಗರ , ಗಾಂಧಿನಗರ , ಶಿವನಗರ ,ಎಸ್ ಎಸ್ ಎಂ ನಗರ , ಬಿ ಡಿ ಲೇಔಟ್ , ಬಿಸ್ಮಿಲ್ಲಾ ಲೇಔಟ್ , ಹೆಗ್ಡೆ ನಗರ , ರಜವುಳ್ಳ ಮುಸ್ತಫಾ ನಗರ , ಅಜಾದ್ ನಗರ ,ಭಾಷಾ ನಗರ ಮೇನ್ ರೋಡ್ .ಎಸ್ ಜೆ ಎಂ ನಗರ 1 ನೇ ಕ್ರಾಸ್ ಇಂದ 16 ನೇ ಕ್ರಾಸ್ ವರೆಗೆ , ಕೇರಿ ,ಅಜಾದ್ ನಗರ 1,2,3 ನೇ ಕ್ರಾಸ್,ಅಹಮದ್ ನಗರ ,ಬಸವರಾಜ್ ಪೇಟೆ ,ಎಚ್ ಸಿ ಗಲ್ಲಿ ,ಕೆಬಿಎನ್ ಗಲ್ಲಿ ,ಗಣೇಶ್ ಪೇಟೆ ,ದೇವಾಂಗ ಪೇಟೆ,ಕಾಳಿಕಾದೇವಿ ರೋಡ್ ,ಎಂ ಜಿ ರೋಡ್ ,ಮಂಡಿಪೇಟೆ ರೋಡ್ ,ಗುಡ್ ಶೆಡ್ ರೋಡ್ ,ಬಿನ್ನಿ ಕಂಪನಿ ರೋಡ್ ,ಮಹಾವೀರ ರೋಡ್ ,ಎನ್ ಆರ್ ರೋಡ್ ,ಚಾಮರಾಜ್ ಪೇಟೆ ,ಗಡಿಯಾರ ಕಂಬ, ವಿಜಯಲಕ್ಷ್ಮಿ ರೋಡ್ ಸುತ್ತ ಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

# ಬಾಲ್ಯ ವಿವಾಹ ಬಗ್ಗೆ ಅರಿವು ಮೂಡಿಸಿ; ಡಿಸಿ

» ದಾವಣಗೆರೆ



ಬಾಲ್ಯವಿವಾಹ ಒಂದು ಸಾಮಾಜಿಕ ಪಿಡುಗಾಗಿದ್ದು, ಈ ಬಗ್ಗೆ ವ್ಯಾಪಕವಾಗಿ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಸೂಚನೆ ನೀಡಿದರು.

ಅವರು (ನ.22 ) ರಂದು ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ. ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯ ಎಲ್ಲಾ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಡ್ಡಾಯವಾಗಿ ಅರಿವು ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಹಮ್ಮಿಕೊಂಡು ವರದಿ ನೀಡಬೇಕೆಂದು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು..

ಕಾರ್ಮಿಕ ಇಲಾಖೆಯಲ್ಲಿಯೂ ಕಾರ್ಮಿಕರ ಮಕ್ಕಳು ಬಾಲ್ಯ ವಿವಾಹಕ್ಕೊಳಗಾಗುತ್ತಿರುವುದರಿಂದ ಕಾರ್ಮಿಕರಿಗೆ ಅರಿವು ಕಾರ್ಯಕ್ರಮ ಏರ್ಪಡಿಸಲು ತಿಳಿಸಿದರು. ತಾಂಡಾಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕುಟುಂಬಗಳಲ್ಲಿ ಮತ್ತು ಹಿಂದುಳಿದ ಸಮುದಾಯಗಳಲ್ಲಿ ಬಾಲ್ಯವಿವಾಹಗಳು ಹೆಚ್ಚಾಗಿ ಕಂಡು ಬರುತ್ತಿರುವುದರಿಂದ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬುಡಕಟ್ಟು ಕಲ್ಯಾಣ ಇಲಾಖೆಗಳು ಈ ಸಮುದಾಯದ ಜನರು ವಾಸಿಸುವ ಪ್ರದೇಶಗಳಲ್ಲಿ ಅರಿವು ಕಾರ್ಯಕ್ರಮಗಳನ್ನುಹಮ್ಮಿಕೊಳ್ಳಬೇಕೆಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಹ ನರೇಗಾ ಕೂಲಿ ಕಾರ್ಮಿಕರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಿದರು. ಬಾಲ್ಯವಿವಾಹ ನಡೆಯದೇ ಇರುವ ಮತ್ತು ಹದಿಹರೆಯದ ಬಾಲಕಿಯರು ಗರ್ಭಿಣಿ ಪ್ರಕರಣ ವರದಿ ಆಗದೆ ಇರುವಂತಹ ಪಂಚಾಯಿತಿಗಳನ್ನು ಗಮನದಲ್ಲಿ ಇಟ್ಟುಕೊಂಡು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಗ್ರಾಮ ಪಂಚಾಯಿತಿಗಳಿಗೆ ಪ್ರಶಂಸನಾ ಪತ್ರ ನೀಡಿ ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಉಪನಿರ್ದೇಶಕರಾದರಾಜನಾಯ್ಕ ಸಭೆಗೆ ಮಾಹಿತಿ ನೀಡಿ ಏಪ್ರಿಲ್–2024 ಮತ್ತು ಮೇ–2024ರ ತಿಂಗಳಲ್ಲಿ ಒಟ್ಟು 26 ಬಾಲ್ಯವಿವಾಹದ ದೂರುಗಳು ಬಂದಿದ್ದು, ಅವುಗಳಲ್ಲಿ 25 ಬಾಲ್ಯವಿವಾಹಗಳನ್ನು ತಡೆದು 2 ಪ್ರಕರಣಗಳಲ್ಲಿ ಕೋರ್ಟ್‌ನಿಂದ ತಡೆಯಾಜ್ಞೆ ಪಡೆಯಲಾಗಿದೆ. ಇದೇ ಅವಧಿಯಲ್ಲಿ ಹೊನ್ನಾಳಿ ತಾಲ್ಲೂಕಿನಲ್ಲಿ 1 ಬಾಲ್ಯವಿವಾಹವು ಆಗಿದ್ದು. ಎಫ್.ಐ.ಆರ್ ದಾಖಲಿಸಲಾಗಿದೆ ಎಂದು ತಿಳಿಸಿದರು.

ಬಾಲ್ಯ ವಿವಾಹ ತಡೆದ ಪ್ರಕರಣಗಳಲ್ಲಿ ಪೋಷಕರು ಮುಂದಿನ ದಿನಗಳಲ್ಲಿ ಮದುವೆ ಮಾಡಬಹುದಾಗಿದೆ ಎಂದು ಸಭೆಗೆ ತಿಳಿಸಿದಾಗ. ಈ ಎಲ್ಲಾ ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಿಸುವುದು ಅಥವಾ ಪೊಲೀ□□ರವರಿಗೆ ಮಾಹಿತಿ ನೀಡಿ ಅನುಸರಣೆ ಮಾಡಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮಾ. ಕರೆಣ್ಣವರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯ್ ಕುಮಾರ್ ಎಂ.ಸಂತೋಷ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ, ಡಿ.ಡಿ.ಪಿ.ಐ ಕೊಟ್ರೇಶ್. ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ವ್ಯಕ್ತಿತ್ವ ವಿಕಸನಕ್ಕೆ ಪಠ್ಯೇತರ ಚಟುವಟಿಕೆ ಅವಶ್ಯಕ: ಕನ್ನಡ ಉಪನ್ಯಾಸಕಿ ಡಾ.ಜಿ.ಕೆ.ಪ್ರೇಮ

» ಚಿತ್ರದುರ್ಗ



ನಮ್ಮವ್ಯಕ್ತಿತ್ವಮತ್ತುಜೀವನವಿಕಸನಗೊಳ್ಳಬೇಕಾದರೆ ಪಠ್ಯೇತರ ಚಟುವಟಿಕೆ ಅವಶ್ಯಕ ಎಂದು ಶಿವಮೊಗ್ಗ ಸಹ್ಯಾದ್ರಿ ಕಲಾ ಕಾಲೇಜು ಕನ್ನಡ ಉಪನ್ಯಾಸಕಿ ಡಾ.ಜಿ.ಕೆ.ಪ್ರೇಮ ಹೇಳಿದರು.

ಕಾಲೇಜು ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಶುಕ್ರವಾರ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಪಠ್ಯೇತರ ಕಾರ್ಯ ಚಟುವಟಿಕೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಚಟುವಟಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಸಾಂಸ್ಕೃತಿಕ, ಕ್ರೀಡೆ, ಎನ್.ಎಸ್.ಎಸ್, ಎನ್.ಸಿ.ಸಿ ಹಾಗೂ ರೆಡ್‌ಕ್ರಾಸ್ ಸೇರಿದಂತೆ ಮುಂತಾದ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಇಂತಹ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಆತ್ಮ ವಿಶ್ವಾಸ, ಸಮಯದ ಮೌಲ್ಯ, ನೈತಿಕ ಜೀವನವನ್ನು ಮೌಲ್ಯಯುತವಾಗಿ ಜೀವಿಸಲು ಅನುಕೂಲವಾಗುತ್ತದೆ. ಜೀವನ ಸರಳ ಹಾಗೂ ಸುಂದರವಾಗಿದೆ. ಶೈಕ್ಷಣಿಕ ಹಾಗೂ ಪಠ್ಯೇತರ ಚಟುವಟಿಕೆಗಳಿಂದ ಜೀವನದಲ್ಲಿ ಎದುರಾಗುವ ಸಂಕಷ್ಟಗಳನ್ನು ಎದುರಿಸುವ ಶಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಮಾತನಾಡಿ, ಶಾಲಾ, ಕಾಲೇಜು ಜ್ಞಾನದ ಕಣಜವಿದ್ದಂತೆ. ಯಾರು ಅದನ್ನು ಮನಸ್ಸಿನಿಂದ ಸ್ಪರ್ಶಿಸುವರು ಜ್ಞಾನಿಗಳಾಗುತ್ತಾರೆ. ಶೈಕ್ಷಣಿಕ ಚಟುವಟಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆ ಅತ್ಯಗತ್ಯ. ಪಠ್ಯೇತರ ಚಟುವಟಿಕೆಗಳಾದ ಸಾಂಸ್ಕೃತಿಕ, ಕ್ರೀಡೆ, ಮುಂತಾದ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ಮೂಡಿಸುವುದು. ಆದ್ದರಿಂದ ವಿದ್ಯಾರ್ಥಿಗಳು ಎಲ್ಲಾ ಕ್ಷೇತ್ರಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಸಹನೆ, ಸಹಕಾರ, ಸಹಿಷ್ಣುತಾ ಮನೋಭಾವ ಬೆಳೆಯುತ್ತದೆ ಎಂದರು.

ಸಾಂಸ್ಕೃತಿ ಸಮಿತಿ ಸಂಚಾಲಕ ಶಿವಣ್ಣ ಪ್ರಾಸ್ತವಿಕವಾಗಿ ಮಾತನಾಡಿದರು. ವಾಣಿಜ್ಯ ಶಾಸ್ತ್ರ ಪ್ರಾಧ್ಯಾಪಕ ಡಾ.ಸಿ.ಚನ್ನಕೇಶವ ಸ್ವಾಗತಿಸಿದರು. ಸಮಾಜ ಶಾಸ್ತ್ರ ಪ್ರಾಧ್ಯಾಪಕ ಡಾ.ಡಿ.ಓ.ಸಿದ್ದಪ್ಪ ವಂದಿಸಿದರು. ರಕ್ಷಿತಾ ವತ್ಸಲಾ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಹಾಗೂ ಎಲ್ಲಾ ಸಮಿತಿ ಸಂಚಾಲಕರು, ಕಾಲೇಜಿನ ಭೋದಕ–ಭೋದಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

## ಯೋಗೀಶ್ ಸಹ್ಯಾದ್ರಿ ಬಿಜೆಪಿ ಸೇರ್ಪಡೆ



» ಚಿತ್ರದುರ್ಗ

ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿಯವರು ಬಿಜೆಪಿ ಸದಸ್ಯತ್ವ ಅಭಿಯಾನದ ಉಸ್ತುವಾರಿಗಳಾದ ದತ್ತಾತ್ರೇಯರವರ ನೇತೃತ್ವದಲ್ಲಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

ಯೋಗೀಶ್ ಸಹ್ಯಾದ್ರಿ, ಇವರು ಚಿತ್ರದುರ್ಗದ ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿಯ ಅಧ್ಯಕ್ಷರಾಗಿದ್ದು, ವೃತ್ತಿಯಲ್ಲಿ ಇಂಗ್ಲಿಷ್ ಭಾಷಾ ಉಪನ್ಯಾಸಕರಾಗಿದ್ದಾರೆ. ರಾಜ್ಯದ ಮೂಡಬಿದಿರೆಯ ಆಳ್ವಾಸ್ ಕಾಲೇಜು, ಸೈಂಟ್ ಅಲೋಶಿಯಸ್ ಕಾಲೇಜು ಹಾಗೂ ಚಿತ್ರದುರ್ಗ ಸೇರಿದಂತೆ ಅನೇಕ ಪಿಯು ಕಾಲೇಜುಗಳಲ್ಲಿ ಇಂಗ್ಲಿಷ್ ಉಪನ್ಯಾಸಕರು, ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದಾರೆ. ಯೋಗೀಶ್ ಸಹ್ಯಾದ್ರಿ ಎಜುಕೇಷನ್ ಟ್ರಸ್ಟ್ ಮೂಲಕ ಜಿಲ್ಲೆಯ ಸರ್ಕಾರಿ ಶಾಲೆ–ಕಾಲೇಜುಗಳು, ಸ್ಲಂ ಪ್ರದೇಶ ಹಾಗೂ ಹಾಸ್ಟೆಲ್ ಮಕ್ಕಳಿಗೆ ಉಚಿತವಾಗಿ ಇಂಗ್ಲಿಷ್ ಕಲಿಸಿಕೊಡುತ್ತಿದ್ದಾರೆ. ಸಾಹಿತ್ಯ ಕ್ಷೇತ್ರದ ಹಲವು ಪ್ರಕಾರಗಳಲ್ಲಿ ಕೆಲಸ ಮಾಡುತ್ತಿರುವ ಇವರು ಕಣ್ಣು ಕವನದ ಮುನ್ನುಡಿ, ದ ಹಿಲ್ಸ್ ಅಲೈವ್ ಮತ್ತು ಅಡ್ವಾನ್ಸ್ಡ್ ಇಂಗ್ಲಿಷ್ ಗ್ರಾಮರ್ ಎಂಬ 3 ಕೃತಿಗಳನ್ನು ರಚಿಸಿದ್ದು, ಚಿತ್ರದುರ್ಗ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಖ್ಯಾತಿ ಪಡೆದಿವೆ.

ಸ್ವತಃ ಕವಿಗಳೂ, ಸಾಹಿತಿಗಳೂ ಆಗಿರುವ ಇವರು ಪ್ರಸ್ತುತ ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ 500 ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಮಕ್ಕಳಿಗಾಗಿ ಆಯೋಜಿಸಿದ್ದಾರೆ. ಇತ್ತೀಚೆಗೆ ಚಿತ್ರದುರ್ಗ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕುರುಬ ಸಮಾಜದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 537ನೇ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ 'ಕನಕಶ್ರೀ ಪ್ರಶಸ್ತಿ'ಯನ್ನು ನೀಡಿ ಗೌರವಿಸಲಾಗಿದೆ.ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ರಾಜ್ಯ ರೈತ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ನಗರಾಧ್ಯಕ್ಷ ನವೀನ್ ಚಾಲುಕ್ಯ ಭಾಗವಹಿಸಿದ್ದರು.

## 26ರಿಂದ ಆಫ್‌ನಿಂದ ಉಪವಾಸ ಸತ್ಯಾಗ್ರಹ

» ಚಿತ್ರದುರ್ಗ



ಭ್ರಷ್ಟಾಚಾರ ಮುಕ್ತ ಚಿತ್ರದುರ್ಗವನ್ನಾಗಿ ಮಾಡುವ ಸಲುವಾಗಿ ನ.26 ರಿಂದ 28ರವರೆಗೆ ಆಮ್ ಆದ್ಮಿ ಪಾರ್ಟಿ ಚಿತ್ರದುರ್ಗ ಘಟಕದವತಿಯಿಂದ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುತ್ತಿದೆ ಎಂದು ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಬಿ.ಇ.ಜಗದೀಶ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ಸಮಾಜಿಕ ನ್ಯಾಯ ಸರಿಯಾದ ರೀತಿಯಲ್ಲಿ ಸಿಕ್ಕಿಲ್ಲ. ಸಂವಿಧಾನದ ಆಶಯಗಳು ಪೂರ್ಣಗೊಂಡಿಲ್ಲ ಎಂದು ಬೇಸರಿಸಿದರು.

ಸಂವಿಧಾನವನ್ನು ಒಪ್ಪಿಕೊಂಡ ನಮಗೆ ಇದರ ಪೂರ್ಣವಾದ ಸೌಲಭ್ಯ ಸಿಗುತ್ತಿಲ್ಲ, ಇದನ್ನು ಹೇಳುವುದರ ಮೂಲಕ ನಮ್ಮನ್ನು ಚುನಾಯುತ ಪ್ರತಿನಿಧಿಗಳು ಯಾಮಾರಿಸುತ್ತಿದ್ದಾರೆ. ಇದರಿಂದ ಹೊರಬರಬೇಕಿದೆ. ಜಿಲ್ಲಾಧಿಕಾರಿ ಕಚೇರಿ ಮುಂದೆ ಮೂರು ದಿನ ಸತ್ಯಾಗ್ರಹ ನಡೆಸಲಾಗುತ್ತದೆ. ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಸೇರಿದಂತೆ ರಾಜ್ಯ ಮಟ್ಟದ ನಾಯಕರು ಭಾಗವಹಿಸಲಿದ್ದಾರೆ ಎಂದರು.

ಕಾರ್ಯದರ್ಶಿ ರಾಮಪ್ಪ, ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ, ಹೊಸದುರ್ಗ ತಾಲ್ಲೂಕು ಅಧ್ಯಕ್ಷ ರಾಜು, ಚಿತ್ರದುರ್ಗ ತಾಲ್ಲೂಕು ಮಹಿಳಾ ಘಟಕದ ಅಧ್ಯಕ್ಷೆ ವಿನೋದಮ್ಮ, ಅಲ್ಪ ಸಂಖ್ಯಾತರ ಘಟಕದ ಆಧ್ಯಕ್ಷ ತನ್ವೀರ್, ಜಂಟಿ ಕಾರ್ಯದರ್ಶಿ ಲೋಕೇಶಪ್ಪ, ಯುವ ಘಟಕದ ಅಧ್ಯಕ್ಷ ರಾಜು ಭಾಗವಹಿಸಿದ್ದರು.

## ಆಕ್ಷೇಪಣೆಗಳಿಗೆ ಅರ್ಜಿ

» ದಾವಣಗೆರೆ

ಸ್ವಚ್ಚ ಭಾರತ್ ಅಭಿಯಾನ 2.0 ಅಡಿಯಲ್ಲಿ ಈಗಾಗಲೇ ಮಲೇಬೆನ್ನೂರು ಪಟ್ಟಣವನ್ನು ಬಯಲು ಶೌಚಮುಕ್ತ ಪಟ್ಟಣವೆಂದು ಘೋಷಣೆಯಾಗಿ ಮತ್ತೊಮ್ಮೆ ಮರು ಪ್ರಮಾಣಿಕರಣವಾಗಿರುತ್ತದೆ. ಮಲೇಬೆನ್ನೂರು ಪಟ್ಟಣವನ್ನು ಬಯಲು ಶೌಚಮುಕ್ತ ಪ್ಲಸ್ ಪಟ್ಟಣವೆಂದು ಘೋಷಣೆ ಮಾಡಬೇಕಾಗಿದ್ದು, ಹಾಗೂ ಎಸ್‌ಬಿಎಂ+ಓಡಿಎಫ್ (ಪ್ಲಸ್) ಸೇವಾ ಗುಣಮಟ್ಟ ಮಾನದಂಡಗಳನ್ನು ಪೂರೈಸಿದ್ದು, ಈ ಬಗ್ಗೆ ಸಾರ್ವಜನಿಕರು ಸಂಘ ಸಂಸ್ಥೆಗಳು ಹಾಗೂ ಸರ್ಕಾರೇತರ ಸಂಸ್ಥೆಗಳು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪ್ರಕಟಣೆಯ ಮೂರು ದಿನಗಳ ಒಳಗಾಗಿ ಮಲೇಬೆನ್ನೂರು ಪುರಸಭೆಗೆ ಲಿಖಿತ ರೂಪದಲ್ಲಿ ಸಲ್ಲಿಸಬೇಕೆಂದು ಮಲೇಬೆನ್ನೂರು ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಆರ್ಥಿಕ ಸಬಲೀಕರಣಕ್ಕಾಗಿ ಗ್ಯಾರಂಟಿ ಯೋಜನೆ ಅನುಷ್ಠಾನ

» ದಾವಣಗೆರೆ



ಜನರ ಹಣಕಾಸಿನ ತೊಂದರೆಗಳನ್ನು ನಿವಾರಿಸಲು ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜು ಹೇಳಿದರು.

ಗುರುವಾರ(21) ರಂದು ನಗರದ ಸರ್ಕಾರಿ ಕಾಲೇಜಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ದಾವಣಗೆರೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಯುವನಿಧಿ ಯೋಜನೆಯ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು. ವಿದ್ಯಾರ್ಥಿಗಳು ಡಿಪ್ಲೋಮಾ, ಪದವಿ ಪೂರೈಸಿಕೊಂಡು ಉದ್ಯೋಗ ಸಿಗುವವರೆಗೆ ವಿವಿಧ ಸಂದರ್ಶನಗಳಿಗೆ ಹಾಜರಾಗಲು ಯುವನಿಧಿಯಿಂದ ಸಹಕಾರಿಯಾಗಲಿದೆ, ಇದರಿಂದ ವಿದ್ಯಾರ್ಥಿಗಳ ಭವಿಷ್ಯ ಉತ್ತಮವಾಗಲಿದೆ ಎಂದರು. ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಸದುಪಯೋಗಪಡಿಸಿಕೊಂಡು, ಅದರಿಂದ ಉತ್ತಮ ಜೀವನ ರೂಪಿಸಿಕೊಳ್ಳುವಂತೆ ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ನಂಜನಾಯ್ಕ ಮಾತಾನಾಡಿ, ವಿದ್ಯಾರ್ಥಿಗಳ ಕುರಿತು ಮೊದಲು ನಾನು ಇದೆ ಕಾಲೇಜಿನಲ್ಲಿ ಸುಮಾರು ಐದು ವರ್ಷಗಳ ಕಾಲ ಕಾರ್ಯ ನಿರ್ವಹಿಸಿದ್ದೇನೆ. ಇಲ್ಲಿ ಬರುವ ಹಲವಾರು ವಿದ್ಯಾರ್ಥಿಗಳಿಗೆ ಇರುವ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡಿದ್ದೇನೆ. ಸ್ಪರ್ಧಾತ್ಮಕ ಪರೀಕ್ಷೆಯನ್ನು ತೆಗೆದುಕೊಳ್ಳಲು ಹಣಕಾಸಿನ ಅವಶ್ಯಕತೆ ತುಂಬಾ ಮುಖ್ಯ, ಹಾಗಾಗಿ ಈ ಯೋಜನೆಯನ್ನು ಎಲ್ಲರೂ ಸಮರ್ಪಕವಾಗಿ ಬಳಸಿಕೊಂಡು ಸಾರ್ಥಕ ಬದುಕು ರೂಪಿಸಿಕೊಳ್ಳಿ ಎಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಬಸವರಾಜ್.ಸಿ ತಹಶೀಲ್ದಾರ್ ಮಾತಾನಾಡಿ ಯುವನಿಧಿ ಅರಿವು ಕಾರ್ಯಕ್ರಮದ ಸದುಪಯೋಗ ಪಡೆಸಿಕೊಳ್ಳಲು ಕರೆ ನೀಡಿದರು.

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ, ಡಿ ಇವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರಾದ ಎಸ್. ಎಸ್. ಗಿರೀಶ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರಾದ ಶ್ರೀಮೈನುದ್ದಿನ್ ಹೆಚ್. ಜೆ. ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಉಪನ್ಯಾಸಕರಾದ, ವೆಂಕಟೇಶ ಬಾಬು ಮತ್ತು ರಾಜ್ ಮೋಹನ್ ಎನ್. ಆರ್, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಮಲ್ಲಿಕಾರ್ಜುನ.ಎಸ್ ಧನಂಜಯ ಬಿ.ಎನ್. ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಅನಾಮಧೇಯ ಶವ ಪತ್ತೆ

» ದಾವಣಗೆರೆ

ದಾವಣಗೆರೆ ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅನಾಮಧೇಯ ಗಂಡಸಿನ ಸುಮಾರು 40 ವರ್ಷದ ಶವ ಪತ್ತೆಯಾಗಿದೆ. ಇವರು ಕಳೆದ ನವಂಬರ್ 21 ರಂದು ಬೆಳಗಿನ ಜಾವ 4 ಗಂಟೆಗೆ ನಗರದ ಪಿ.ಬಿ.ರಸ್ತೆಯಲ್ಲಿರುವ ಖಾಸಗಿ ಬಸ್ ನಿಲ್ದಾಣದ ಎದುರು ದ್ವಾರಕ ಹೋಟೆಲ್ ಬಳಿ ಯಾವುದೋ ಖಾಯಿಲೆಯಿಂದ ಮೃತಪಟ್ಟಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5.2 ಅಡಿ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ 2 ಇಂಚು ಕಪ್ಪು ಕೂದಲುವುಳ್ಳವನಾಗಿರುತ್ತಾನೆ. ಬಲಗೈಯಲ್ಲಿ ಎ ಭೂಮಿಕಾ ಅಂತ ಮತ್ತು ಎಡಗೈಯಲ್ಲಿ ಲಕ್ಷ್ಮೀ ಅರ್ಜುನ ಅಂತ ಹಚ್ಚೆ ಇರುತ್ತದೆ. ಹಳದಿ ಮತ್ತು ಪಚ್ಚೆ ಹಸಿರು ಬಣ್ಣದ ತುಂಬು ತೋಳಿನ ಟಿ ಶರ್ಟ್, ಕಂದು ಬಣ್ಣದ ನಿಕ್ಕರ್, ಕೆಂಪು ಬಣ್ಣದ ಲೋಯರ್ ಧರಿಸಿರುತ್ತಾನೆ. ಹೆಚ್ಚಿನ ಮಾಹಿತಿಗಾಗಿ ಬಡಾವಣೆ ಪೊಲೀಸ್ ಠಾಣೆಯ ದೂ.ಸಂ: 08192-272012, 259213, 253400, 253100 ನ್ನು ಸಂಪರ್ಕಿಸಲು ಠಾಣೆಯ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರಮಟ್ಟದ ಜ್ಯೂನಿಯರ್ ತಂಡಕ್ಕೆ ಖೋ-ಖೋ ಕ್ರೀಡಾಪಟು ಆಯ್ಕೆ



» ದಾವಣಗೆರೆ

ನವಂಬರ್ 25 ರಿಂದ 29 ರ ವರೆಗೆ ಉತ್ತರ ಪ್ರದೇಶದ ಅಲಿಘರ್‌ನಲ್ಲಿ ನಡೆಯಲಿರುವ 43ನೇ ರಾಷ್ಟ್ರ ಮಟ್ಟದ ಜ್ಯೂನಿಯರ್ ಖೋ-ಖೋ ಚಾಂಪಿಯನ್‌ಷಿಪ್‌ನಲ್ಲಿ ಭಾಗವಹಿಸಲಿರುವ ಕರ್ನಾಟಕ ರಾಜ್ಯ ಬಾಲಕರ ತಂಡಕ್ಕೆ ದಾವಣಗೆರೆ ಕ್ರೀಡಾ ವಸತಿ ನಿಲಯದ ಖೋ-ಖೋ ಕ್ರೀಡಾಪಟುಗಳಾದ ಹುಲಗಪ್ಪ, ನಿಖಿಲ್, ವಿಜಯ್ ಹಾಗೂ ವಿನಾಯಕ ಇವರುಗಳು ಆಯ್ಕೆಯಾಗಿರುತ್ತಾರೆ.ಕ್ರೀಡಾಪಟುಗಳು ಇಲಾಖೆಯ ತರಬೇತುದಾರರಾದ ರಾಮಲಿಂಗಪ್ಪಜೆ, ಖೋ-ಖೋ ತರಬೇತುದಾರರು ಇವರ ಬಳಿ ತರಬೇತಿ ಪಡೆಯುತ್ತಿದ್ದಾರೆ. ಖೋ-ಖೋ ಕ್ರೀಡಾಪಟುಗಳಿಗೆ ಸಹಾಯಕ ನಿರ್ದೇಶಕರಾದ ರೇಣುಕಾದೇವಿ, ಅಧೀಕ್ಷರಾದ ಅರ್ಪಿತಕೆ.ಜೆ, ಹಾಗೂ ಎಲ್ಲಾ ತರಬೇತುದಾರರು,ರಾಷ್ಟ್ರಮಟ್ಟದಲ್ಲಿ ಭಾಗವಹಿಸುವ ಕರ್ನಾಟಕ ರಾಜ್ಯ ತಂಡವು ಉತ್ತಮ ಸಾಧನೆ ಮಾಡಲೆಂದು ಶುಭ ಹಾರೈಸಿದ್ದಾರೆ.

## ನೊಂದಾಯಿತ ಸ್ವಯಂ ಸೇವಾ ಸಂಘ ಸಂಸ್ಥೆಗಳಿಂದ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರತಿಬಂಧ ಅಧಿನಿಯಮ ಮತ್ತು ನಿಯಮಗಳ ಬಗ್ಗೆ ಅರಿವು ಮೂಡಿಸಲು ನೊಂದಾಯಿತ ಸ್ವಯಂ ಸೇವಾ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಸೇವಾ ಸಂಸ್ಥೆಗಳು ಸಂಸ್ಥೆಯ ನೊಂದಣಿ ಪ್ರಮಾಣ ಪತ್ರ, ನವೀಕರಣ ಪ್ರಮಾಣ ಪತ್ರ, 3 ವರ್ಷದ ಅಡಿಟ್ ರಿಪೋರ್ಟ್, 5 ವರ್ಷ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ದಿಗಾಗಿ ಸೇವೆ ಸಲ್ಲಿಸಿರಬೇಕು. ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಿರುವ ದಾಖಲೆಗಳು, ಛಾಯಾಚಿತ್ರ, ಪತ್ರಿಕಾ ವರದಿಗಳೊಂದಿಗೆ ಅರ್ಜಿಯನ್ನು ನವಂಬರ್ 30 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು(ಗ್ರೇಡ್-2) ಸಮಾಜ ಕಲ್ಯಾಣ ಇಲಾಖೆ, ಹರಿಹರ ಇವರನ್ನು ಸಂಪರ್ಕಿಸಿ.

## ವಿಕಲಚೇತನರ ಕ್ರೀಡಾ ಸ್ಪರ್ಧೆಗಳ ಉದ್ಘಾಟನೆ

» ದಾವಣಗೆರೆ

ನವಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ-2024ರ ಪ್ರಯುಕ್ತ ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿಕಲಚೇತನರ ಶ್ರೇಯೋಭಿವೃದ್ದಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿರುವ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್.ಮಾ.ಕರೆಣ್ಣನವರ್ ಉದ್ಘಾಟಿಸುವರು. ಅಪರ ಜಿಲ್ಲಾಧಿಕಾರಿ ಹಾಗೂ ವಿಶ್ವ ವಿಕಲಚೇತನರ ದಿನಾಚರಣೆ ಸಮಿತಿಯ ಅಧ್ಯಕ್ಷರಾಧ ಪಿ.ಎನ್ ಲೋಕೇಶ್ ಅಧ್ಯಕ್ಷತೆ ವಹಿಸುವರು.

# ಚರಂಡಿ ವ್ಯವಸ್ಥೆ ಇಲ್ಲದೆ ಚಡಪಡಿಸುತ್ತಿರುವ ಪಟ್ಟಣದ ಭಗೀರಥ ಬಡಾವಣೆಯ ನಾಗರೀಕರು

» ನಾಗತಿಹಳ್ಳಿಮಂಜುನಾಥ್



ನಮ್ಮ ಜನ ವಿಶೇಷ



ಹೊಸದುರ್ಗ:ಪಟ್ಟಣದ ಭಗೀರಥ ಬಡಾವಣೆ ಎಂದರೆ ಇಲ್ಲಿ ಬಹುತೇಕ ನೌಕರರು,ಉದ್ಯಮಿಗಳು ಅಧಿಕಾರಿಗಳು ಸೇರಿದಂತೆ ಉನ್ನತ ವ್ಯಕ್ತಿಗಳೆ ವಾಸ ಮಾಡುತ್ತಿರುವ ಬಡಾವಣೆ ಆದರೂ ಇಲ್ಲೊಂದು ವ್ಯವಸ್ಥಿತವಾದ ಮೂಲ ಸೌಕರ್ಯಗಳಿಲ್ಲ ಮಳೆ ಬಂದಾಗ ನೀರು ಹೋಗಲು ಮನೆಗಳ ಬಚ್ಚಲು ನೀರು ಮತ್ತಿತರೆ ನೀರು ವ್ಯವಸ್ಥಿತವಾಗಿ ಹೋಗುಲು ಸಾಧ್ಯವಾಗದೆ ಸುಮಾರು ವರ್ಷಗಳಿಂದ ಇಲ್ಲಿನ ಜನರು ನರಕಯಾತನೆ ಅನುಭವಿಸುತ್ತಿದ್ದಾರೆ.ಈ ಭಾಗದ ಚುನಾಯಿತ ಪ್ರತಿನಿಧಿಗಳಾಗಲಿ ಪುರಸಭಾ ಅಧಿಕಾರಿಗಳಾಗಲಿ ತಲೆ ಹಾಕುತ್ತಿಲ್ಲ ಎಂಬುದು ಮಾತ್ರ ಇಲ್ಲಿನ ನಿವಾಸಿಗಳಿಗೆ ಸಾಕಷ್ಟು ನೋವು ತಂದಿದೆ.

ಪಟ್ಟಣದ ಭಗೀರಥ ಬಡಾವಣೆ ಖಾದಿ ಕೇಂದ್ರದ ಸಮೀಪ ಕೊಳಚೆ ನೀರು, ಕಾಲುವೆ ನದಿಯಂತೆ ಹರಿಯುತ್ತಿದೆ. ದುರ್ವಾಸನೆಗೆ ಜನ ಮೂಗು ಮುಚ್ಚಿಕೊಂಡು ಓಡಾಡುವಂತಹ ದುಸ್ಥಿತಿ ಎದುರಾಗಿದೆ. ಪಟ್ಟಣದ ಭಗೀರಥ ಬಡಾವಣೆಯಲ್ಲಿ ಸೂಕ್ತ ಚರಂಡಿ ವ್ಯವಸ್ಥೆ ಇಲ್ಲ. ಒಂದೇ ಕಡೆ ಕೊಳಚೆ ನೀರು ಹರಿಯುತ್ತದೆ. ಬೇಸಿಗೆಯಲ್ಲಿ ಸ್ವಲ್ಪ ಒಣಗುವುದರಿಂದ ವಾಹನ ಸವಾರರಿಗೆ ಕಿರಿಕಿರಿ ಇರುವುದಿಲ್ಲ. ಮಳೆಗಾಲದಲ್ಲಂತೂ ಈ ಭಾಗದ ಜನರು ಓಡಾಡಲು ಹರಸಾಹಸ ಪಡಬೇಕಾಗುತ್ತದೆ. ವಾಹನ ಸವಾರರಂತೂ ಈ ಮಾರ್ಗದಲ್ಲಿ ಸಂಚರಿಸುವುದು ಇಲ್ಲ. ಮಕ್ಕಳು ಓಡಾಡಲು ಸಹ ಜಾಗವಿಲ್ಲ. ಹಳ್ಳದಂತೆ ಕೊಳಚೆ ನೀರು ನಿತ್ಯ ಹರಿಯುತ್ತಿದೆ. ಇದಕ್ಕೆ ಸಮರ್ಪಕ ನಿರ್ವಹಣೆ ಇಲ್ಲದಂತಾಗಿದೆ.

ಕಳೆದ ಐದು ವರ್ಷಗಳಿಂದಲೂ ಈ ಸಮಸ್ಯೆ ತಪ್ಪಿಲ್ಲ, ಅಧಿಕಾರಿಗಳಿಗೆ, ವಾರ್ಡ್ ಸದಸ್ಯರಿಗೆ ಹಲವು ಬಾರಿ ಮನವಿ ಮಾಡಿದರೂ, ಯಾವುದೇ ಪ್ರಯೋಜನವಾಗುತ್ತಿಲ್ಲ.

ಇಲ್ಲಿರುವ ಜನರೇನು ಮನುಷ್ಯರಲ್ಲವೇ. ನಿತ್ಯ ಕೊಳಚೆ ನೀರಿನ ದುರ್ವಾಸನೆ ಇದೆ. ಸಾಲದ್ದಕ್ಕೆ ಸೊಳ್ಳೆಗಳ ಕಾಟವೂ ಇದೆ. ಮನೆ ಎದುರಿನಲ್ಲಿಯೇ ಕೆಸರು ಇದ್ದು, ಓಡಾಡಲು ತೊಂದರೆಯಾಗಿದೆ.

ಬಾಗಿಲ ತೆಗೆದರೆ ಸಾಕು, ಮೊದಲು ಕೊಳಚೆ ನೀರಿನ ದರ್ಶನವಾಗುತ್ತದೆ. ಹದ ಮಳೆ ಬಂದರೆ ಸತತ ಮೂರು ದಿನಗಳ ಕಾಲ ಇಲ್ಲಿ ನೀರು ಹರಿಯುತ್ತದೆ. ರಸ್ತೆಯಲ್ಲಿದ್ದ ಮಣ್ಣು ಎಲ್ಲಾ ಕೊಚ್ಚಿಹೋಗಿ, ತಗ್ಗಿನಂತಾಗಿದೆ. ಈ ವ್ಯವಸ್ಥೆಯಿಂದಾಗಿ ಸಾಕಪ್ಪಾ ಸಾಕು ಎನ್ನುವಂತಾಗಿದೆ ಇಲ್ಲಿನ ನಿವಾಸಿಗಳ ಸ್ಥಿತಿ ಮಳೆ ಬಂದಾಗ ಅಧಿಕಾರಿಗಳು ಬಂದು, ಸ್ವಲ್ಪ ನೀರು ಹೋಗಲು ವ್ಯವಸ್ಥೆ ಮಾಡಿ ಕೊಡುತ್ತಾರೆ. ಅದು ಒಂದೇ ದಿನ ನಂತರ ಯಥಾಸ್ಥಿತಿಯಲ್ಲೇ ಕೊಳಚೆ ನೀರು ಹರಿಯುತ್ತಿರುತ್ತದೆ. ಒಮ್ಮೊಮ್ಮೆ ಹಾವುಗಳು ಸಹ ಈ ಮಾರ್ಗದಲ್ಲಿ ಓಡಾಡುತ್ತಿರುತ್ತವೆ. ಇಲ್ಲಿನ ನಿವಾಸಿಗಳ ಬಗ್ಗೆ ಚುನಾಯಿತ ಪ್ರತಿನಿಧಿಗಳಾದಂತವರು ಕಾಳಜಿ ವಹಿಸಬೇಕು ಎಂಬುದು ಇಲ್ಲಿನ ನಿವಾಸಿಗಳ ಒತ್ತಾಯವಾಗಿದೆ.

> ಲೇಔಟ್ ಮಾಲೀಕರು ಚರಂಡಿ, ರಸ್ತೆ ಹೀಗೆ ಮೂಲ ಸೌಕರ್ಯಗಳನ್ನು ಕಲ್ಪಿಸ ಬೇಕಿತ್ತು. ಆ ಕಾರ್ಯ ಆಗಿಲ್ಲ. ಈ ಭಾಗದ ಜನರಿಗೆ ರಸ್ತೆ, ಚರಂಡಿ ನಿರ್ಮಾಣ ಸೇರಿದಂತೆ ಹಲವು ಮೂಲ ಸೌಕರ್ಯ ಕಲ್ಪಿಸಲು ವ್ಯವಸ್ಥೆ ಮಾಡಲಾಗುವುದು ಶಾಸಕರ ಅನುದಾನದಲ್ಲಿ ಹಣಕ್ಕೆ ಬೇಡಿಕೆ ಇಡಲಾಗಿದೆ ಸರ್ಕಾರ ಅನುಮತಿ ನೀಡಿದ ಕೂಡಲೇ ಈ ಭಾಗದಲ್ಲಿ ಸೂಕ್ತ ಚರಂಡಿ ಸೇರಿದಂತೆ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗುವುದು.
>
> » ತಿಮ್ಮರಾಜು ಜಿ.ವಿ.ಮುಖ್ಯಾಧಿಕಾರಿ ಪುರಸಭೆ ಹೊಸದುರ್ಗ

### ಹೊಸದುರ್ಗ ತಾಲೂಕಿನಲ್ಲಿ 2680 ಹೆಕ್ಟೇರ್ ಪ್ರದೇಶದಲ್ಲಿ ಕಡಲೆ ಬಿತ್ತನೆ

# ಕಡಲೆ ಬೆಳೆಗೆ ಸೊರಗು ರೋಗ: ಪರಿಹಾರಕ್ಕೆ ಮಾಹಿತಿ

» ಹೊಸದುರ್ಗ



ತಾಲೂಕಿನ ಹಲವು ಕಡೆಗಳಲ್ಲಿ ಕಡಲೆ ಬೆಳೆಯನ್ನ ಬೆಳೆಯಲಾಗುತ್ತಿದೆ, ಆದರೆ ಇತ್ತೀಚಿನ ದಿನಗಳಲ್ಲಿ ಈ ಕಡಲೆ ಬೆಳೆಗೆ ಸೊರಗು ರೋಗ ಕಾಣಿಸಿಕೊಂಡು ಬೆಳೆ ಬೆಳೆಯುತ್ತಿರುವ ರೈತರಲ್ಲಿ ಒಂದು ರೀತಿಯಲ್ಲಿ ಆತಂಕ ಮನೆ ಮಾಡಿದ್ದು ರೈತರು ಅತಂಕ ಪಡುವ ಅಗತ್ಯವಿಲ್ಲ ಎಂದು ಇಲ್ಲಿನ ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್. ಈಶ ರೈತರಲ್ಲಿ ಆತ್ಮಸ್ಥೈರ್ಯ ತುಂಬಲು ಮುಂದಾಗಿದ್ದಾರೆ.

ತಾಲೂಕಿನ ಬಾಗೂರಿನಲ್ಲಿ ಕ್ಷೇತ್ರ ಬೇಟಿ ಮಾಡಿ ರೈತರಿಗೆ ಕಡಲೆ ರೋಗದ ಬಗ್ಗೆ ಮಾಹಿತಿ ನೀಡಿದ ಅವರು ಕಡಲೆ ಗಿಡಗಳ ಎಲೆಗಳು ಹಳದಿ ಬಣ್ಣಕ್ಕೆ ತಿರುಗುತ್ತವೆ, ಗಿಡಗಳು ಬೆಳವಣಿಗೆ ಹಂತದಿಂದ ಹೆಚಾ ಗಿ ಹೂವಿನ ಹಂತದಿಂದ ಕಾಳು ಕಟ್ಟುವವರೆಗೆ ಸಾಯುತ್ತಿರುತ್ತವೆ ಇವು ರೋಗದ ಚಿನ್ಹೆಗಳಾಗಿದ್ದು ಇದನ್ನು ನಿಯಂತ್ರಿಸುವ ಸಲುವಾಗಿ ರೈತರು ಅನುಸರಿಸಬೇಕಾದ ಕ್ರಮಗಳೆಂದರೆ ಸೊರಗು ರೋಗ ಬಂದಿರುವ ಗಿಡಗಳನ್ನು ಕಿತ್ತು ನಾಶಪಡಿಸಬೇಕು. ಬಿತ್ತನೆಗೆ ಮೊದಲು ಪ್ರತಿ ಎಕರೆಗೆ ಬೇಕಾಗುವ ರೈಜೋಬಿಯಂ ಹಾಗೂ ರಂಜಕ ಕರಗಿಸುವ ಜೀವಾಣುಗಳಿಂದ ಲೇಪಿಸಿ ಬಿತ್ತನೆ ಮಾಡಬೇಕು ಅಥವಾ ಕಾರ್ಬೆಂಡೈಜಿಂ ಅಥವಾ ಥೈರಾಮ್ 2ಗ್ರಾಂ ಪ್ರತಿ 1 ಕೆಜಿ ಬೀಜಕ್ಕೆ ಲೇಪಿಸಿ ಬಿತ್ತನೆ ಮಾಡಬೇಕು. ಬಿತ್ತನೆಗೆ 3 ವಾರ ಮೊದಲು ಕೊಟ್ಟಿಗೆ ಗೊಬ್ಬರ ಅಥವಾ ಬೇವಿನ ಹಿಂಡಿ ಭೂಮಿಗೆ ಹಾಕಬೇಕು. ಕಾರ್ಬೆಂಡೈಜಿಂ 50 ಡಬ್ಲ್ಯೂ.ಪಿ 2 ಗ್ರಾಂ/ಲೀ ಮತ್ತು ಟ್ರೈಕೋಡರ್ಮಾ ವಿರಿಡೇ 5 ಗ್ರಾಂ/ಲೀ ನೀರಿನೊಂದಿಗೆ ಬೆರೆಸಿ ಸಿಂಪಡಿಸಬೇಕು. ಕಾರ್ಬೆಂಡೈಜಿಂ 50 ಡಬ್ಲ್ಯೂ.ಪಿ 1ಗ್ರಾಂ/ಲೀನೀರಿನೊಂದಿಗೆಬೆರೆಸಿಬುಡದಸುತ್ತಲೂ ತೇವಗೊಳಿಸಬೇಕು. ಬೆಳೆ ಪರಿವರ್ತನೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು (ಹಿಂಗಾರಿ ಜೋಳದ ಬೆಳೆ ಹಾಕಬೇಕು) ಎಂದು ಅವರು ಮಾಹಿತಿ ನೀಡಿದರು.



ಹೊಸದುರ್ಗ ಪಟ್ಟಣದ ಪುರಸಭಾ ಆವರಣದಲ್ಲಿ ಆಯೋಜಿಲಾಗಿದ್ದ ಪೌರಕಾರ್ಮಿಕರಿಗೆ ನಿತ್ಯ ಬಳಕೆಯ ವಸ್ತುಗಳ ಕಿಟ್ ವಿತರಿಸಿದ ಪುರಸಭಾ ಅಧ್ಯಕ್ಷೆ ಶ್ರೀಮತಿರಾಜೇಶ್ವರಿಆನಂದ್

## ಇಂದು ವಿದ್ಯುತ್ ವ್ಯತ್ಯಯ

» ಹೊಸದುರ್ಗ

ಹೊಸದುರ್ಗ ಪಟ್ಟಣದ ಶಾಂತಿ ನಗರದಲ್ಲಿ ಅಪಾಯಕಾರಿ 11 ಕೆವಿ ವಿದ್ಯುತ್ ಮಾರ್ಗವನ್ನು ಸ್ಥಳಾಂತರ ಮಾಡುವ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಹೊಸದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಕಲ್ಲೋಡು ಪಂಚಾಯಿತಿ ಮತ್ತು ಹುಣವಿನೋಡು ಪಂಚಾಯಿತಿಯ ಎಲ್ಲಾ ಗ್ರಾಮಗಳು ಮತ್ತು ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಇಂದು (ನ.23) ರಂದು ಶನಿವಾರ ಬೆಳಿಗ್ಗೆ 10 ರಿಂದ ಸಂಜೆ 6 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ನೇತ್ರ ತಪಾಸಣಾ ಶಿಬಿರ

» ಹೊಸದುರ್ಗ

ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ,ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್ ಮತ್ತು ಶ್ರೀ ವಿನಾಯಕ ಸ್ವಾಮಿ ದೇವಸ್ಥಾನ ಟ್ರಸ್ಟ್ ಹೊಸದುರ್ಗ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ ಹಾಗು ಮತ್ತಿತರ ಸಮುದಾಯಗಳ ಸಹಭಾಗಿತ್ವದಲ್ಲಿ ನ. 23 ರಂದು ಶನಿವಾರ ಪಟ್ಟಣದ ಹುಳಿಯಾರು ರಸ್ತೆಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಉಚಿತ ನೇತ್ರ ತಪಾಸಣಾ ಮತ್ತು ಚಿಕಿತ್ಸಾ ಶಿಬಿರ ಕಣ್ಣಿನ ಇತರೆ ತೊಂದರೆಗಳಿಗೆ ಚಿಕಿತ್ಸೆ ನೀಡಲಾಗುವುದು ಎಂದು ,ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್ ಅಧ್ಯಕ್ಷ ಹಂಜಿ ಶಿವಸ್ವಾಮಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ 9008733470-9901706731 ಸಂಪರ್ಕಿಸಬಹುದು

## ಗೋ.ರು.ಚ ಆಯ್ಕೆಗೆ ಸ್ವಾಗತ

» ಹೊಸದುರ್ಗ

ಮಂಡ್ಯದಲ್ಲಿ ಆಯೋಜಿಸಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ಈ ನಾಡು ಕಂಡಂತಹ ಹಿರಿಯ ಸಾಹಿತಿ ಗೋ.ರು.ಚನ್ನಬಸಪ್ಪ ಅವರನ್ನ ಆಯ್ಕೆ ಮಾಡಿರುವುದು ಸ್ವಾಗತಾರ್ಹ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಕಾರ್ಯದರ್ಶಿ ಹಾಗೂ ಸಾಹಿತಿ ನಾಗತಿಹಳ್ಳಿಮಂಜುನಾಥ್ ಹೇಳಿದ್ದಾರೆ. ಹಿರಿಯ ಸಾಹಿತಿ,ಚಿಂತಕ ಗೋ.ರು.ಚನ್ನಬಸಪ್ಪ ಅವರು ಈ ನಾಡಿನ ಸಾರಸ್ವತ ಲೋಕಕ್ಕೆ ಅಪಾರ ಕೊಡುಗೆಯನ್ನ ನೀಡಿರುವ ಇವರನ್ನ ಆಯ್ಕೆ ಮಾಡಿರುವುದು ಸಂತಸ ತಂದಿದೆ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

# ಕನ್ನಡ ಭಾಷೆಯನ್ನು ಸಮರ್ಥವಾಗಿ ಬೆಳೆಸಿ, ಉಳಿಸುವ ಸಂಕಲ್ಪವನ್ನು ಪ್ರತಿಯೊಬ್ಬರೂ ಮಾಡಬೇಕು: ವೀರಭದ್ರಸ್ವಾಮಿ

» ಚಳ್ಳಕೆರೆ



ಕರ್ನಾಟಕದಲ್ಲಿ ಕಳೆದ ಹಲವಾರು ವರ್ಷಗಳಿಂದ ಕನ್ನಡ ಭಾಷೆಯನ್ನು ಆಡಳಿತ ಭಾಷೆಯನ್ನಾಗಿ ಮಾಡುವ ಮೂಲಕ ಎಲ್ಲಾ ಕನ್ನಡಿಗರೂ ಕನ್ನಡದಲ್ಲೇ ವ್ಯವಹಾರ ನಡೆಸಲು ಸರ್ಕಾರ ಅವಕಾಶ ಮಾಡಿಕೊಟ್ಟಿದೆ. ರಾಜ್ಯದ ಬೆಂಗಳೂರು ಸೇರಿದಂತೆ ಹಲವಾರು ನಗರಗಳಲ್ಲಿ ಪ್ರತಿವರ್ಷದ ನವೆಂಬರ್ ತಿಂಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಲಾಗುತ್ತದೆ. ಕನ್ನಡದ ಮೇಲೆ ಅಭಿಮಾನ ಕೇವಲ ಕಾರ್ಯಕ್ರಮಕ್ಕೆ ಸೀಮಿತವಾಗದೆ ನಿಜಜೀವನದಲ್ಲೂ ನಿರಂತರ ಕನ್ನಡದ ಮೇಲೆ ಅಭಿಮಾನವನ್ನು ಪ್ರತಿಯೊಬ್ಬ ಕನ್ನಡಿಗನೂ ಹೊಂದಬೇಕೆಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಅವರು, ಶುಕ್ರವಾರ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ಕರ್ನಾಟಕ ರಕ್ಷಣಾ ವೇದಿಕೆ(ಪ್ರವೀಣ್‌ಶೆಟ್ಟಿಬಣ) 5ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ರಾಜ್ಯದ ಎಲ್ಲಾ ಕನ್ನಡಪರ ಸಂಘಟನೆಗಳು ಒಂದೇ ವೇದಿಕೆಯಲ್ಲಿ ಸಂಘಟಿತವಾಗಿ ಕನ್ನಡ ನಾಡು, ನುಡಿಯ ಬಗ್ಗೆ ಅನಿವಾರ್ಯ ಬಿದ್ದಲ್ಲಿ ಹೋರಾಟ ನಡೆಸಬೇಕು. ವಿಶೇಷವಾಗಿ ರಾಜ್ಯದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಶೆಟ್ಟಿ ಬಣ ಕನ್ನಡ ಭಾಷೆಯ ಸಾರ್ವಭೌಮತ್ವವನ್ನು ಎತ್ತಿಹಿಡಿಲು ನಿರಂತರ ಶ್ರಮಿಸುತ್ತಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವೇದಿಕೆಯ ಗೌರವಾಧ್ಯಕ್ಷ ಸಿ.ಬೋಜರಾಜ(ರಾಜಣ್ಣ), ಪ್ರತಿವರ್ಷ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ, ಸಡಗರಗಳಿಂದ ಆಚರಣೆ ಮಾಡುತ್ತೇವೆ. ಕರ್ನಾಟದಲ್ಲಿ ನೆಲೆಸಿರುವ ಪ್ರತಿಯೊಬ್ಬರು ಕನ್ನಡ ಭಾಷೆಯ ಉಳಿವಿಗೆ ಶ್ರಮಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಧ್ಯಕ್ಷ ಪಿ.ಮಂಜುನಾಥ, ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಶೆಟ್ಟಿ ಬಣ ರಾಜ್ಯದಾದ್ಯಂತ ಪ್ರಬಲ ಸಂಘಟನೆಯನ್ನು ಹೊಂದಿದೆ. ಯಾವುದೇ ಸಂದರ್ಭದಲ್ಲೂ ಯಾರಾದರೂ ಕನ್ನಡ ಭಾಷೆಯ ಮೇಲೆ ದಬ್ಬಾಳಿಕೆ ನಡೆಸಲು ಬಂದರೆ ಸಹಿಸುವುದಿಲ್ಲ. ವೇದಿಕೆಯ ಎಲ್ಲಾ ಕಾರ್ಯಕರ್ತರು ಕನ್ನಡಕ್ಕೆ ಅವಮಾನವಾದಾಗ ಸಿಡಿದೇಳುವುದರಲ್ಲಿ ಸಂಶಯವಿಲ್ಲವೆಂದರು.

ಕಾರ್ಯಕ್ರಮದಲ್ಲಿ ನಗರಸಭೆ ನಾಮಿನಿ ಸದಸ್ಯ ನೇತಾಜಿಪ್ರಸನ್ನ, ವಿಶ್ವಕರ್ಮಪರಿಷತ್ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಭಿ.ಪರೀದ್‌ಖಾನ್, ಬೇಕರಿವಿಜಯ್, ಎಂ.ಚೇತನ್‌ಕುಮಾರ್, ಮುರುಳಿ, ಮಾರುತಿ, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಮರಿಕುಂಟೆಚಂದ್ರಣ್ಣ, ರವಿ, ಬಾಲು, ಅಜಯ್, ಅರವಿಂದ, ವೀರೇಶ್ ಮುಂತಾದವರು ಉಪಸ್ಥಿತರಿದ್ದರು. ಶಾಲಾ ಮಕ್ಕಳಿಂದ ನಾಡಗೀತೆಯೂ ಸೇರಿದಂತೆ ಹಲವಾರು ಕನ್ನಡ ಗೀತೆಗಳನ್ನು ಹಾಡಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T